ಸಂಪುಟ : 9 ಸಂಚಿಕೆ 08 ಪುಟ : 4 ಬೆಲೆ : 3.00 ಶನಿವಾರ ಫೆಬ್ರುವರಿ 3, 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 08 Pages : 4 Price : 3.00 Saturday February 3, 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಬೆಟಗೇರಿ ಅವಳಿ ನಗರದಲ್ಲಿ ಫೆಬ್ರವರಿ 3ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

**ಸ್ಥಳಗಳ ವಿವರ :** ವಾರ್ಡ್ ನಂ. 22ರಲ್ಲಿ ವಿಠಲ ಸವಾರಿ ಅವರ ಲೈನ್, ರಿಯಾಜ್ ಅವರ ಲೈನ್, ಗಾರ್ಡನ್ ಲೈನ್, ನಿಂಗಪ್ಪ ಲೈನ್, ಶುದ್ಧ ನೀರಿನ ಘಟಕದ ಲೈನ್, ವಾರ್ಡ್ ನಂ. 12ರಲ್ಲಿ ನಿಸರ್ಗ ಬಡಾವಣೆ, ವಾರ್ಡ್ ನಂ. 19, 16, 18ರಲ್ಲಿ ಮಡಿವಾಳ ದೇವಸ್ಥಾನ, ಕುಂಬಾರ್ ಓಣಿ, ಬಾಗಲಕೋಟಿ ಅವರ ಲೈನ್, ಅಂಬೇಡ್ಕರ್ ಗಲ್ಲಿ, ಡೋರ್‌ಗಲ್ಲಿ, ಕೊನೇರಿ ಹೊಂಡ, ಹನುಮಂತ ದೇವರು ಗುಡಿ ಲೈನ್,

ವಾರ್ಡ್ ನಂ. 27ರಲ್ಲಿ ಸ್ಟೇಡಿಯಂ ವಕೀಲರ ಲೈನ್, ಲಖಾನಿಯವರ ಲೈನ್, ಇಂಜಿನಿಯರ್ ಲೈನ್ ಉಳಿದ ಕೆಲವು ಭಾಗಗಳು, ಕಲಾಮಂದಿರ, ಅಕ್ಕನ ಬಳಗ, ಮೂರುಶಿಳ್ಳಿನ ವಕಾರ, ನಂದೀಶ್ವರ ನಗರ, ವಾರ್ಡ್ ನಂ. 5 6 7ರಲ್ಲಿ ಪಂಚಲಕ್ಷ್ಮಿ ಬಡಾವಣೆ, ರೇಣುಕಾಚಾರ್ಯ ಕಲ್ಯಾಣ ಮಂಟಪ, ಹನುಮಂತ ದೇವರು ಗುಡಿ ಲೈನ್ ಉಳಿದ ಭಾಗಗಳು, ವಾರ್ಡ್ ನಂ. 29ರಲ್ಲಿ ಟೀಚರ್ಸ್ ಕಾಲೋನಿಯ ಭಾಗಗಳು, ವಾರ್ಡ್ ನಂ. 26, 24 ರಲ್ಲಿ ಮಖಾನಗಲ್ಲಿ, ಬನ್ನಿ ಮಹಾಕಾಳಿ ಗುಡಿ ರಸ್ತೆ, ತಗ್ಗಿನ ಪ್ಲಾಟ್, ಸಾಲ ಮನೆ, ಅಬ್ಬಿಗೇರಿ ಕಾಂಪೌಂಡ್, ಕಮ್ಮಾರ್ ಸಾಲಿ, ಉರ್ದು ಶಾಲೆ ಹಿಂದಿನ ಭಾಗ

ಈಗಾಗಲೇ ಕುಡಿಯುವ ನೀರಿನ ನಳ ಹೊಂದಿರುವ ಬಾಕಿದಾರರ ಪಟ್ಟಿ ತಯಾರಿಸಿದ್ದು, ನಾಗರಿಕರು ಕೂಡಲೇ ತಮ್ಮ ಕುಡಿಯುವ ನೀರಿನ ಬಾಕಿ ಕರವನ್ನು ಸಂದಾಯ ಮಾಡುವಂತೆ ಗದಗ ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ನೋಟೀಸ್‌ಗೆ ದಂಡ ಕಟ್ಟದ 119 ಬೈಕ್ ಸವಾರರ ವಿರುದ್ಧ ಕಠಿಣ ಕ್ರಮಕ್ಕೆ ಮುಂದಾದ ಪೊಲೀಸ್ ಇಲಾಖೆ

## ದಂಡ ಕಟ್ಟದಿದ್ರೆ ಕಾದಿದೆ ಆಪತ್ತು!

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಸುಗಮ ಸಂಚಾರ ಹಾಗೂ ಸುರಕ್ಷತೆಯ ದೃಷ್ಟಿಯಿಂದ ವಿಶೇಷ ಹಾಗೂ ಆಧುನಿಕ 'ಥರ್ಡ್ ಐ' ಅನುಷ್ಠಾನಗೊಳಿಸಲಾಗಿದೆ. ಪ್ರಮುಖ ವೃತ್ತಗಳಲ್ಲಿ, ವಾಹನ ಸಂಚಾರ ದಟ್ಟಣೆ ಹೆಚ್ಚಿರುವ ಪ್ರಮುಖ ರಸ್ತೆಎಗಳಲ್ಲಿ ಸಿಸಿಟಿವಿ ಕ್ಯಾಮರಾ ಅಳವಡಿಸಲಾಗಿದೆ. ಸಂಚಾರ ನಿಯಮಗಳನ್ನು ಉಲ್ಲಂಘಿಸಿದವರ ಮನೆಗೇ ನೋಟೀಸ್‌ಗಳು ತಲುಪುತ್ತಿವೆ. ಇಷ್ಟಿದ್ದರೂ ಕೂಡ ಹಲವು ಬೈಕ್ ಸವಾರರು ಎಷ್ಟೇ ನೋಟೀಸ್ ನೀಡಿದರೂ ಕ್ಯಾರೇ ಎನ್ನುತ್ತಿಲ್ಲ. ದಂಡ ಕಟ್ಟುತ್ತಿಲ್ಲ. ಇದೇಕೆ ಎಂದು ಪ್ರಶ್ನಿಸುತ್ತಲೂ ಇಲ್ಲ. ಅಸಲಿಗೆ, 10-15 ಬಾರಿ ನೋಟಿಸ್ ನೀಡಿದ್ದರೂ ಪೊಲೀಸರಿಗೆ ಕವಡೆಕಾಸಿನ ಕಿಮ್ಮತ್ತು ನೀಡುತ್ತಿಲ್ಲ.

'ಥರ್ಡ್ ಐ' ಜಾರಿಯಾದ ನಂತರ ಸಂಚಾರ ನಿಯಮ ಉಲ್ಲಂಘನೆಯ ಅಪರಾಧಕ್ಕೆ ಸಂಬಂಧಿಸಿ 45 ಲಕ್ಷ ರೂ. ದಂಡವನ್ನೂ ಸಂಗ್ರಹಣೆ ಮಾಡಲಾಗಿದೆ. ಆದರೆ, ಅವಳಿ



ನಗರದ 119 ಬೈಕ್ ಸವಾರರು ಮಾತ್ರ ದಂಡ ಕಟ್ಟುತ್ತಿಲ್ಲ. ಪೊಲೀಸರು ಮನೆಗೆ ಕಳಿಸುವ ನೋಟಿಸ್‌ಗೂ ಪ್ರತಿಕ್ರಿಯಿಸುತ್ತಿಲ್ಲ. ಇಂತಹ 119 ಬೈಕ್ ಸವಾರರ ವಿರುದ್ಧ ಸಮರ ಸಾರಿರುವ ಪೊಲೀಸ್ ಇಲಾಖೆ ಕಠಿಣ ಕ್ರಮಕ್ಕೆ ಮುಂದಾಗಿದೆ. ಪೊಲೀಸ್ ಇಲಾಖೆ ಇಂತಹ ಎಲ್ಲಾ ಬೈಕ್ ಸವಾರರನ್ನು ಪತ್ತೆ ಮಾಡಿದೆ. ಅವರು ದಂಡವನ್ನು ಕಟ್ಟಬೇಕು, ಇಲ್ಲವಾದರೆ ಅವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವದು. ಬೈಕ್ ವಶಕ್ಕೆ ಪಡೆದು, ಅಂತಹ ಬೈಕ್ ಸವಾರರನ್ನು ಬಂಧಿಸಿ, ನ್ಯಾಯಾಲಯಕ್ಕೆ ಹಾಜರುಪಡಿಸುವ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಅಂತಿಮ ಎಚ್ಚರಿಕೆ ನೀಡಿದ್ದಾರೆ.

ಗದಗ-ಬೆಟಗೇರಿ ಅವಳಿ ನಗರದಲ್ಲಿ 'ಥರ್ಡ್ ಐ' ಕಣ್ಗಾವಲು ಪರಿಣಾಮಕಾರಿಯಾಗಿ ಅನುಷ್ಠಾನವಾಗಿದೆ. ಗದಗ ಎಸ್‌ಪಿ ಕಚೇರಿಯಲ್ಲಿರುವ ಕಂಟ್ರೋಲ್ ರೂಮ್‌ನಲ್ಲಿ ವಾಹನ ಚಾಲಕರ ಪ್ರತಿಯೊಂದು ಅಪರಾಧಗಳೂ ದಾಖಲಾಗುತ್ತಿವೆ. ಸಂಚಾರ ನಿಯಮ ಉಲ್ಲಂಘನೆ, ಹೆಲ್ಮೆಟ್ ಇಲ್ಲದೆ ಬೈಕ್ ಓಡಿಸುವುದು, ಅಪಘಾತಗಳು ಹೀಗೆ ಪ್ರತಿಯೊಂದು ಚಿತ್ರಣವೂ ಕಚೇರಿ



ಇತ್ತೀಚೆಗಷ್ಟೇ ಪೊಲೀಸ್ ಇಲಾಖೆ ವಿಶೇಷ ಕಾರ್ಯಾಚರಣೆ ನಡೆಸಿ, 150 ಬೈಕ್‌ಗಳನ್ನು ವಶಕ್ಕೆ ಪಡೆದು, ದಂಡವನ್ನು ವಸೂಲಿ ಮಾಡಿತ್ತು. ನೋಟಿಸ್ ಬಂದವರು, ದಂಡವನ್ನು ಕಟ್ಟುತ್ತಿದ್ದಾರೆ. ಆದರೆ, ಇನ್ನೂ 119 ಬೈಕ್ ಸವಾರರು ಮಾತ್ರ ದಂಡ ಪಾವತಿಗೆ ಮುಂದಾಗುತ್ತಿಲ್ಲ. ಇಂತವರ ಮೇಲೆ ಪೊಲೀಸರು ಕಠಿಣ ಕ್ರಮವನ್ನು ಕೈಗೊಳ್ಳಲು ಮುಂದಾಗಿದ್ದಾರೆ.

ಸಿಬ್ಬಂದಿಗಳ ಕಣ್ಣೆದುರಿರುತ್ತದೆ.

ಕೆಲ ವಾಹನ ಸವಾರರು ಪೊಲೀಸರಿಗೂ ಚಳ್ಳೆಹಣ್ಣು ತಿನ್ನಿಸುವ ಉದ್ದೇಶದಿಂದ ನಂಬರ್ ಪ್ಲೇಟ್ ಕಾಣದಂತೆ, ಹಾಗೂ ನಂಬರ್‌ನಲ್ಲಿ ಒಂದು ನಂಬರ್ ಬದಲಾವಣೆ ಮಾಡುವ ಮೂಲಕ ಪೊಲೀಸರನ್ನೇ ಯಾಮಾರಿಸುತ್ತಿದ್ದರು.

## ಜಿ.ಪಂ.ನಲ್ಲಿ 'ನರೇಗಾ ದಿವಸ್' ಆಚರಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಮಹಾತ್ಮಗಾಂಧಿ ನರೇಗಾ ಯೋಜನೆಯ 18 ವರ್ಷದ ಸಂಭ್ರಮಾಚರಣೆಯನ್ನು ಕೇಕ್ ಕತ್ತರಿಸುವ ಮೂಲಕ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಉಪ ಕಾರ್ಯದರ್ಶಿ ಸಿ.ಆರ್. ಮುಂಡರಗಿ ಮಾತನಾಡಿ, ನರೇಗಾ ಯೋಜನೆ ಗ್ರಾಮೀಣ ಪ್ರದೇಶದ ಕೂಲಿಕಾರರಿಗೆ ವರದಾನವಾಗಿದೆ. ಈ ಯೋಜನೆಯು ಜಿಲ್ಲೆಯ ಲಕ್ಷಾಂತರ ಕೂಲಿಕಾರರ ನೆಮ್ಮದಿಯ ಜೀವನಕ್ಕೆ ಆಸರೆಯಾಗಿದೆ ಎಂದರು.

ಈಗಾಗಲೇ ಜಿಲ್ಲೆಯು ಆಯುಕ್ತಾಲಯದ ವಾರ್ಷಿಕ ಗುರಿಯ ಶೇ. 116ರಷ್ಟು ಪ್ರಗತಿ ಸಾಧಿಸಿದೆ. ಈ ವರ್ಷ ನಮ್ಮ ಜಿಲ್ಲೆಯು ವಾರ್ಷಿಕ ಗುರಿಯನ್ನು ವರ್ಷದ ಪೂರ್ವಾರ್ಧದಲ್ಲಿಯೇ ಸಾಧಿಸಿರುವುದು ಜಿಲ್ಲೆಗೆ ಹೆಮ್ಮೆಯ ವಿಚಾರವಾಗಿದೆ. ಜಿಲ್ಲೆಯಲ್ಲಿ ಯೋಜನೆಯನ್ನು ಪರಿಣಾಮಕಾರಿ ಹಾಗೂ ಸಮರ್ಪಕವಾಗಿ ಅನುಷ್ಠಾನ ಮಾಡುವ ಮೂಲಕ ಜಿಲ್ಲೆಯ ಎಲ್ಲಾ ಗ್ರಾ.ಪಂ.ಗಳಲ್ಲಿ ಅಕುಶಲ ಕೂಲಿಕಾರರೂ ಸ್ವಾವಲಂಬನೆಯಿಂದ ಜೀವನ ನಡೆಸಲು ಯೋಜನೆ ಸಹಕಾರಿಯಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಯೋಜನಾ ನಿರ್ದೇಶಕರು, ಮುಖ್ಯ ಲೆಕ್ಕಾಧಿಕಾರಿಗಳು, ಮುಖ್ಯ ಯೋಜನಾಧಿಕಾರಿಗಳು, ಸಹಾಯಕ ಉಪ ಕಾರ್ಯದರ್ಶಿಗಳು, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು, ಕಚೇರಿ ವ್ಯವಸ್ಥಾಪಕರು ಹಾಗೂ ಜಿ.ಪಂ ನರೇಗಾ/ಇತರೆ ಶಾಖೆಯ ಸಿಬ್ಬಂದಿಗಳು ಹಾಜರಿದ್ದರು.


### ಪತ್ರಿಕಾಗೋಷ್ಠಿಯಲ್ಲಿ ರಂಗ ಕಲಾವಿದ ಡಾ.ಯಶವಂತ ಸರದೇಶಪಾಂಡೆ ಮಾಹಿತಿ

## 'ಸೂಪರ್ ಸಂಸಾರ' ಹಾಸ್ಯ ನಾಟಕ ಪ್ರದರ್ಶನ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ವಿದ್ಯಾದಾನ ಸಮಿತಿ, ಕಲಾಚೇತನ ಹಾಗೂ ಹುಬ್ಬಳ್ಳಿಯ ಗುರು ಇನ್ಸ್ಟಿಟ್ಯೂಟ್ ಸಹಯೋಗದಲ್ಲಿ ನಗರದ ವಿದ್ಯಾದಾನ ಸಮಿತಿ ಶಾಲೆ ಆವರಣದಲ್ಲಿ ಫೆ.11ರಂದು ಸಾಯಂಕಾಲ 6.30ಕ್ಕೆ 'ಸೂಪರ್ ಸಂಸಾರ' ನಾಟಕ ಪ್ರದರ್ಶನ ಹಮ್ಮಿಕೊಳ್ಳಲಾಗಿದೆ ಎಂದು ರಂಗ ಕಲಾವಿದ, ನಿರ್ದೇಶಕ ಡಾ. ಯಶವಂತ ಸರದೇಶಪಾಂಡೆ ಹೇಳಿದರು.

ನಗರದ ಪತ್ರಿಕಾಭವನದಲ್ಲಿ ಶುಕ್ರವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 'ಉದಯವಾಗಲಿ ಚೆಲುವ ಕನ್ನಡ ನಾಡು' ಗೀತೆ ರಚಿಸಿದ ನಾಡಕವಿ ಹುಯಿಲಗೋಳ ನಾರಾಯಣರಾವ್ ಸ್ಮರಣಾರ್ಥ ರಂಗ ನಮನ ಸಲ್ಲಿಸಲು ನಗೆ ನಾಟಕ ಪ್ರದರ್ಶನ ಹಮ್ಮಿಕೊಳ್ಳಲಾಗಿದೆ.



ಗದಗ ನಗರದಲ್ಲಿ ಕಳೆದ 6 ವರ್ಷಗಳ ಹಿಂದೆ 'ಹೀಗೇಕೆ ನೀ ದೂರ ಓಡುವೆ' ನಾಟಕ ಪ್ರದರ್ಶನ ಮಾಡಲಾಗಿತ್ತು. ಈಗ ಸಂತೋಷ ಪವಾರ ಮರಾಠಿಯಲ್ಲಿ ರಚಿಸಿದ ನಾಟಕವನ್ನು ನನ್ನ ನೇತೃತ್ವದಲ್ಲಿ ಕನ್ನಡಕ್ಕೆ ಅನುವಾದಿಸಿ ನಿರ್ದೇಶನ ಮಾಡಿರುವ 'ಸೂಪರ್ ಸಂಸಾರ' ಹಾಸ್ಯ ನಾಟಕವು ಈಗಾಗಲೇ ಹುಬ್ಬಳ್ಳಿ, ಧಾರವಾಡ, ಬೆಂಗಳೂರು, ಬೆಳಗಾವಿ, ಶಿವಮೊಗ್ಗ, ದಾವಣಗೆರೆಯಲ್ಲಿ ಯಶಸ್ವಿ ಪ್ರದರ್ಶನದ ಮೂಲಕ ಪ್ರೇಕ್ಷಕರನ್ನು ರಂಜಿಸಿದೆ ಎಂದರು.

ಮದುವೆಯಾದ ಮೇಲೆ ಗಂಡ-ಹೆಂಡತಿ ಪರಸ್ಪರ ಸಂಸಾರದಲ್ಲಿ ಹೇಗೆ ಹೊಂದಿಕೊಂಡು ಹೋಗಬೇಕು ಎಂಬುದರ ಮೂಲ ಅಂಶವನ್ನಿಟ್ಟುಕೊಂಡು ನಾಟಕ ಪ್ರದರ್ಶನ ನಡೆಯಲಿದೆ.

ನಾಟಕದಲ್ಲಿ ನಾಯಕನಿಗೆ ರಾತ್ರಿ ಕಣ್ಣು ಕಾಣುವುದಿಲ್ಲ, ಹೆಂಡತಿಗೆ ಬೆಳಿಗ್ಗೆ ಕಣ್ಣು ಕಾಣುವುದಿಲ್ಲ. ಹೀಗಿದ್ದರೂ ನಾಯಕ ನಾಯಕಿಯನ್ನು ಬೆಳಿಗ್ಗೆ, ನಾಯಕಿ ನಾಯಕನನ್ನು ರಾತ್ರಿ ಹೇಗೆ ಸಂಬಾಳಿಸಿಕೊಂಡು ಹೋಗುತ್ತಾನೆ ಎಂಬ ಸನ್ನಿವೇಶಗಳನ್ನು ಹಾಸ್ಯಮಯವಾಗಿ ತೋರಿಸಲಾಗುತ್ತದೆ ಎಂದು ಡಾ. ಯಶವಂತ ಸರದೇಶಪಾಂಡೆ ಹೇಳಿದರು.

ಒಂದು ಪ್ರಯೋಗ ಪ್ರದರ್ಶನ ಮಾಡಲು ಕನಿಷ್ಠ 70 ಸಾವಿರ ರೂ. ಖರ್ಚಾಗುತ್ತದೆ. ಹೀಗಾಗಿ ಕಲಾವಿದರಿಗೆ, ತಂತ್ರಜ್ಞರಿಗೆ ಅನುಕೂಲ ಕಲ್ಪಿಸಲು 200ರಿಂದ 300 ರೂ. ಟಿಕೆಟ್ ದರ ನಿಗದಿಪಡಿಸಲಾಗಿದೆ. ಆಸಕ್ತರು ಟಿಕೆಟ್‌ಗಾಗಿ ವಿದ್ಯಾದಾನ ಸಮಿತಿ ಮೊ-7676283552 ಹಾಗೂ ನೇಸರ ಹೋಟೆಲ್ ಮೊ-9008826056 ಸಂಪರ್ಕಿಸಬಹುದು ಎಂದರು.

ಸುದ್ದಿಗೋಷ್ಠಿಯಲ್ಲಿ ವಿದ್ಯಾದಾನ ಸಮಿತಿ ಕಾರ್ಯದರ್ಶಿ ಶ್ರೀನಿವಾಸ ಹುಯಿಲಗೋಳ ಇದ್ದರು.

## ಮಹಾತ್ಮರ ಅನುಭಾವವೇ ನೆಮ್ಮದಿಯ ಮೂಲ



■ ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಸುಕ್ಷೇತ್ರ ಬಳಗಾನೂರಿನ ಚಿಕೇನಕೊಪ್ಪದ ಚನ್ನವೀರಶರಣರ 29ನೇ ಪುಣ್ಯಸ್ಮರಣೋತ್ಸವ, ಜಾತ್ರಾ ಮಹೋತ್ಸವದ ಅಂಗವಾಗಿ ರೋಣ ತಾಲೂಕ ಕುರಡಗಿ ಗ್ರಾಮದಲ್ಲಿ ಸುಕ್ಷೇತ್ರ ಬಳಗಾನೂರಿನ ಪೂಜ್ಯ ಶ್ರೀ ಶಿವಶಾಂತವೀರ ಶರಣರಿಂದ ಸದ್ಭಾವನಾ ಪಾದಯಾತ್ರೆ ಜರುಗಿತು.

ಶ್ರೀ ಶಿವಶಾಂತವೀರ ಶರಣರು ಆಶೀರ್ವಚನ ನೀಡಿ, ಮನುಷ್ಯನಿಗೆ ಸಮಾಧಾನ ಮತ್ತು ಶಾಂತಿಯ ಅವಶ್ಯಕತೆ ಇದೆ. ಇದು ಮನುಷ್ಯನಿಗೆ ಸಂತೆಯಲ್ಲಿ ದೊರೆಯುವುದಿಲ್ಲ. ಶಾಂತಿ-ಸಮಾಧಾನ ಪಡೆಯಲು ಆಧ್ಯಾತ್ಮ ಜ್ಞಾನ, ಸತ್ಸಂಗ ಅವಶ್ಯಕವಾಗಿದೆ. ಆ ದಿಸೆಯಲ್ಲಿ ಮನುಷ್ಯ ತನ್ನ ಹೃದಯ ಶ್ರೀಮಂತಿಕೆ ಹೆಚ್ಚಿಸಿಕೊಂಡು, ಪ್ರೀತಿ-ವಿಶ್ವಾಸದಿಂದ ಬದುಕಿ ಜೀವನದ ಸಾರ್ಥಕತೆ ಹೆಚ್ಚಿಕೊಳ್ಳಬೇಕೆಂದರು.

ಸಂಪತ್ತು ಮತ್ತೊಂದು ರೂಪ ಪಡೆದು ಬದಲಾಗುತ್ತದೆ. ಶ್ರೀಮಂತ ಬಡವನಾಗಬಹುದು, ಬಡವ ಶ್ರೀಮಂತನಾಗಬಹುದು. ಇದು ಶಾಶ್ವತವಲ್ಲ. ಶರಣರ ಸಂದೇಶ, ಮಹಾತ್ಮರ ಅನುಭಾವ ಬದುಕಿನಲ್ಲಿ ಶಾಂತಿ, ನೆಮ್ಮದಿ ತಂದು ಕೊಡುತ್ತದೆ. ತನ್ಮೂಲಕ ಸಂತೃಪ್ತ ಬದುಕನ್ನು ಹೊಂದಬಹುದು ಎಂದು ಆಶೀರ್ವಚನ ನೀಡಿದರು.

ಪೂಜ್ಯರ ಸದ್ಭಾವ ಯಾತ್ರೆಯಲ್ಲಿ ಗ್ರಾಮದ ಸಮಸ್ತ ಸದ್ಭಕ್ತರು, ತಾಯಂದಿರು ಹಾಗೂ ಹೊಂಬಳದ ಭಜನಾ ಮಂಡಳಿಯವರು ಪಾಲ್ಗೊಂಡಿದ್ದರು.

### 12ನೇ ಶತಮಾನದಲ್ಲಿ ಬಸವಾದಿ ಶರಣರು ಸಮಾನತೆ ಪ್ರತಿಪಾದನೆ ಮಾಡಿದ್ದರು-ಸಿಎಂ

## ಮನುಷ್ಯ ಮನುಷ್ಯರ ನಡುವೆ ಬೇಧ ಭಾವ ಇರಬಾರದು

■ ವಿಜಯಸಾಕ್ಷಿ ಸುದ್ದಿ, ವಿಜಯನಗರ

12ನೇ ಶತಮಾನದಲ್ಲಿ ಇದ್ದ ಬಸವಾದಿ ಶರಣರು ಸಮಾನತೆ ಪ್ರತಿಪಾದನೆ ಮಾಡಿದರು. ಯಾವುದೇ ಕಾರಣಕ್ಕೂ ಮನುಷ್ಯ ಮನುಷ್ಯರ ನಡುವೆ ಬೇಧ-ಭಾವ ಇರಬಾರದು ಎಂದು ಪ್ರತಿಪಾದಿಸಿದರು. ಅದನ್ನೇ ನಾವು ಇಂದು ನಮ್ಮ ಸಂವಿಧಾನದಲ್ಲಿ ಅಳವಡಿಸಿಕೊಂಡಿದ್ದೇವೆ. ಆದರೆ, ಅಂತಹ ಸಂವಿಧಾನಕ್ಕೆ ಇಂದು ಧಕ್ಕೆ ಬರುವಂತಹ ಸ್ಥಿತಿ ನಿರ್ಮಾಣ ಆಗಿದೆ. ಸಂವಿಧಾನ ತಿರುಚುವ, ಬದಲಾಯಿಸುವ ಮಾತು ಕೇಳಿಬರುತ್ತಿವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಸಮಾಧಾನ ವ್ಯಕ್ತಪಡಿಸಿದರು.

ಶುಕ್ರವಾರ ಜಿಲ್ಲೆಯ ಹಂಪಿಯ ಗಾಯತ್ರಿ ಮಂಟಪದಲ್ಲಿ ಹಮ್ಮಿಕೊಂಡ ಮೂರು ದಿನಗಳ ಹಂಪಿ ಉತ್ಸವಕ್ಕೆ ಚಾಲನೆ ನೀಡಿ, ಮಾತನಾಡಿದ ಅವರು, ಯಾರೇ ಆಗಲಿ ಮೊದಲು ಇತಿಹಾಸವನ್ನು ತಿಳಿಯಬೇಕು. ಒಂದು ವೇಳೆ ಇತಿಹಾಸ ಅರಿಯದೇ



ಹೋದರೆ ಕೇಂದ್ರದಲ್ಲಿರುವ ಕೋಮುವಾದಿ ಪಕ್ಷದ ಮುಖಂಡರು ಹೇಳುವುದನ್ನೇ ಸತ್ಯ ಎಂದು ಅರಿಯಬೇಕಾದ ಸ್ಥಿತಿ ಬರಲಿದೆ. ಇದೇ ಕಾರಣಕ್ಕೆ ಡಾ. ಬಿ.ಆರ್. ಅಂಬೇಡ್ಕರ್ ಸಹ ಇತಿಹಾಸ ಅರಿಯದವ ಇತಿಹಾಸ ಸೃಷ್ಟಿಸಲಾರ ಎಂದು ತಿಳಿಸಿದ್ದರು. ನಾವೆಲ್ಲಾ ಅವರ ಮಾತನ್ನು ಅರಿತು ನಿಜ ಇತಿಹಾಸ ಅರಿಯಬೇಕು ಎಂದರು.

ವಿಜಯನಗರ ಅರಸರ ಕಾಲದಲ್ಲಿ ಈ ಸಾಮ್ರಾಜ್ಯ ಅತ್ಯಂತ ಸುಭಿಕ್ಷವಾಗಿತ್ತು. ಎಲ್ಲರೂ ಸುಖವಾಗಿ ಇದ್ದರು. ಅಂತಹ ಸುಖವನ್ನು ಮತ್ತೆ ನಮ್ಮ ರಾಜ್ಯದಲ್ಲಿ ಕಾಣುವ ಗುರಿಯನ್ನು ನಮ್ಮ ಸರ್ಕಾರ ಹೊಂದಿದೆ. ಇಡೀ ದೇಶಕ್ಕೆ ಕರ್ನಾಟಕವನ್ನು ಮಾದರಿ ರಾಜ್ಯ ಮಾಡುತ್ತೇವೆ ಎಂದರು.

ನಮ್ಮ ಸರ್ಕಾರ ಯುರೋಪ್ ಮಾದರಿಯಲ್ಲಿ ಪ್ರತೀ ನಾಗರಿಕರಿಗೆ ಕನಿಷ್ಠ ಆದಾಯ ದೊರಕುವಂತೆ ಮಾಡಲು ಯೋಜನೆ ರೂಪಿಸಿದೆ. ಇಂದು ನಾವು ನೀಡುತ್ತಿರುವ ಐದು ಗ್ಯಾರಂಟಿಗಳ ಗುರಿ ಇದೇ ಆಗಿದೆ. ಇದರ ಮೂಲಕ ಯುನಿವರ್ಸಲ್ ಮಿನಿಮಂ ಇನ್‌ಕಂ ಎಂಬ ಬ್ರಿಟಿಷರ ನಾಡಲ್ಲಿ ಇರುವ ಪದ್ಧತಿಯನ್ನು ಇಲ್ಲಿಗೆ ತಂದಿದ್ದೇವೆ ಎಂದು ಅವರು ತಿಳಿಸಿದರು.

ನಾನು ಗ್ಯಾರಂಟಿಗಳನ್ನು ಘೋಷಿಸಿದಾಗ ಎಲ್ಲರೂ ನನ್ನನ್ನು ಟೀಕಿಸಿದರು. ಇವೆಲ್ಲಾ ಸಾಧ್ಯವೇ ಎಂದು ಪ್ರಶ್ನಿಸಿದರು. ಆದರೆ, ಇಂದು ಅವರೇ ನಮ್ಮದನ್ನೇ ಕಾಪಿ ಮಾಡುತ್ತಿದ್ದಾರೆ. ಅದನ್ನೇ ಮೋದಿ ಗ್ಯಾರಂಟಿ ಎಂದು ಹೇಳುತ್ತಿದ್ದಾರೆ ಎಂದು ಅವರು ವ್ಯಂಗ್ಯವಾಡಿದರು.

ಇಂದಿನ ನಾಡ ಹಬ್ಬ ದಸರಾ ಮೊದಲು ವಿಜಯನಗರಲ್ಲಿ ನಡೆಯುತ್ತಿತ್ತು. ಸಾಮ್ರಾಜ್ಯ ಪತನವಾದ ನಂತರ ಅದನ್ನು ಮೈಸೂರು ಮಹಾರಾಜರು ಅಲ್ಲಿ ಆರಂಭಿಸಿದರು.

ಇದನ್ನೇ ಮುಂದಿಟ್ಟ ಎಂ.ಪಿ. ಪ್ರಕಾಶ್ ಅವರು ಹಂಪಿ ಉತ್ಸವ ಆಚರಿಸಬೇಕು ಎಂದು ಕೋರಿದ್ದರು. 1987ರಲ್ಲಿ ನಾನು ಮೊಟ್ಟ ಮೊದಲ ಹಂಪಿ ಉತ್ಸವಕ್ಕೆ ಅನುದಾನ ನೀಡಿದ್ದೆ ಎಂದರು.

# ಕೇಂದ್ರದ ಮಲತಾಯಿ ಧೋರಣೆಯಿಂದ ರಾಜ್ಯಕ್ಕೆ 62 ಸಾವಿರ ಕೋಟಿ ರೂ. ನಷ್ಟ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**



"ಕೇಂದ್ರ ಬಜೆಟ್ ನಲ್ಲಿ ಕರ್ನಾಟಕ ರಾಜ್ಯಕ್ಕೆ ನಿರಂತರ ಅನ್ಯಾಯವಾಗುತ್ತಿದೆ. ಕೇಂದ್ರದ ಮಲತಾಯಿ ಧೋರಣೆಯಿಂದ ಕಳೆದ 5 ವರ್ಷಗಳಲ್ಲಿ ರಾಜ್ಯಕ್ಕೆ 62 ಸಾವಿರ ಕೋಟಿ ಹಣ ನಷ್ಟವಾಗಿದೆ. ಹೀಗಾಗಿ ಫೆ. 7 ರಂದು ಕಾಂಗ್ರೆಸ್ ಸರಕಾರದ ಪ್ರತಿನಿಧಿಗಳು ದೆಹಲಿಯಲ್ಲಿ ಪ್ರತಿಭಟನೆ ನಡೆಸಲಿದ್ದಾರೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದ್ದಾರೆ.

ವಿಧಾನಸೌಧದಲ್ಲಿ ಮಾಧ್ಯಮಗೋಷ್ಠಿ ನಡೆಸಿ ಮಾತನಾಡಿದ ಶಿವಕುಮಾರ್ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ಫೆ.07 ರಂದು ದೆಹಲಿಯಲ್ಲಿ ನಾನು ಸೇರಿದಂತೆ ರಾಜ್ಯದ ಸಚಿವರು, ಸಂಸದರು, ಶಾಸಕರು, ವಿಧಾನ ಪರಿಷತ್ ಸದಸ್ಯರು ಈ ಪ್ರತಿಭಟನೆಯಲ್ಲಿ ಭಾಗವಹಿಸುತ್ತೇವೆ ಎಂದು ಹೇಳಿದ್ದಾರೆ.

ಪ್ರತಿಭಟನೆ ಸ್ಥಳವಕಾಶದ ಬಗ್ಗೆ ಕೆಂದ್ರಕ್ಕೆ ಪತ್ರ ಬರೆದಿದ್ದು, ಅನುಮತಿ ಸಿಕ್ಕ ಸ್ಥಳದಲ್ಲಿ ಪ್ರತಿಭಟನೆ ನಡೆಸುತ್ತೇವೆ. ಪ್ರಜಾತಂತ್ರ ವ್ಯವಸ್ಥೆಯಲ್ಲಿ ಪ್ರತಿಭಟನೆ ನಮ್ಮ ಮೂಲಭೂತ ಹಕ್ಕು. ಕಾಂಗ್ರೆಸ್ ಜನಪ್ರತಿನಿಧಿಗಳು ಭಾಗವಹಿಸಲಿರುವ ಈ ಪ್ರತಿಭಟನೆಯಲ್ಲಿ ಪ್ರತಿಪಕ್ಷದ ಸಂಸದರು. ಶಾಸಕರು ಭಾಗವಹಿಸಬೇಕು ಎಂದು ಮನವಿ ಮಾಡುತ್ತೇನೆ.

2018-19ರಲ್ಲಿ ಕೇಂದ್ರ ಸರ್ಕಾರದ ಬಜೆಟ್ ಗಾತ್ರ 24.5 ಲಕ್ಷ ಕೋಟಿ ಇತ್ತು. 2023-24ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ ಬಜೆಟ್ ಗಾತ್ರ ದುಪ್ಪಟ್ಟಾಗಿದ್ದು 45 ಲಕ್ಷ ಕೋಟಿಯಾಗಿದೆ. 2018-19ರಲ್ಲಿ ಕೇಂದ್ರ ಸರ್ಕಾರದ ಬಜೆಟ್ ನಲ್ಲಿ ರಾಜ್ಯಕ್ಕೆ 46 ಸಾವಿರ ಕೋಟಿ ಅನುದಾನ ಸಿಕ್ಕಿತ್ತು. ಆದರೆ 2024-25ನೇ ಸಾಲಿನಲ್ಲಿ ರಾಜ್ಯಕ್ಕೆ ಬಂದಿರುವ ಅನುದಾನ ಕೇವಲ 50 ಸಾವಿರ ಕೋಟಿ ಮಾತ್ರ. ಕೇಂದ್ರ ಸರ್ಕಾರದ ಬಜೆಟ್ ಗಾತ್ರ ದುಪ್ಪಟ್ಟಾಗಿದ್ದರೂ ರಾಜ್ಯಕ್ಕೆ ಬರುವ ಅನುದಾನದ ಪ್ರಮಾಣದಲ್ಲಿ ಅತ್ಯಲ್ಪ ಏರಿಕೆ ಮಾತ್ರವಾಗಿದೆ ಎಂದು ಡಿಕೆ ಶಿವಕುಮಾರ್ ಅಂಕಿ-ಅಂಶಗಳನ್ನು ಉಲ್ಲೇಖಿಸಿದ್ದಾರೆ.

# ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ 40 ಸೀಟು ಪಡೆಯುವುದೂ ಅನುಮಾನ

**■ವಿಜಯಸಾಕ್ಷಿ ಸುದ್ದಿ, ಕೋಲ್ಕತಾ**



ಕಾಂಗ್ರೆಸ್ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರು, ಹಿಂದಿ ಹೃದಯಭಾಗದ ರಾಜ್ಯಗಳಲ್ಲಿ ಭಾರತೀಯ ಜನತಾ ಪಕ್ಷವನ್ನು ಎದುರಿಸುವಂತೆ ಮಿತ್ರ ಪಕ್ಷಕ್ಕೆ ಶುಕ್ರವಾರ ಸವಾಲು ಹಾಕಿದ್ದಾರೆ.

ಮುಂಬರುವ ಲೋಕಸಭೆಯಲ್ಲಿ ಕಾಂಗ್ರೆಸ್ ಪಕ್ಷ "40 ಸ್ಥಾನಗಳನ್ನು" ಪಡೆಯುವುದು ಅನುಮಾನ ಎಂದು ಟಿಎಂಸಿ ಮುಖ್ಯಸ್ಥೆ ಹೇಳಿದ್ದಾರೆ.

ಪಶ್ಚಿಮ ಬಂಗಾಳದ ಆರು ಜಿಲ್ಲೆಗಳಲ್ಲಿ ಸಂಚರಿಸಿದ ಕಾಂಗ್ರೆಸ್‌ನ ಭಾರತ್ ಜೋಡೋ ನ್ಯಾಯ್ ಯಾತ್ರೆಯನ್ನು ಟೀಕಿಸಿದ ಬ್ಯಾನರ್ಜಿ, ರಾಜ್ಯಕ್ಕೆ ಬಂದಿರುವ "ವಲಸೆ ಹಕ್ಕಿಗಳಿಗೆ" "ಕೇವಲ ಫೋಟೋಗೆ ಅವಕಾಶ" ನೀಡುತ್ತಿದೆ ಎಂದಿದ್ದಾರೆ.

"ಕಾಂಗ್ರೆಸ್ ದೇಶಾದ್ಯಂತ 300 ಸ್ಥಾನಗಳಲ್ಲಿ ಸ್ಪರ್ಧಿಸಬೇಕೆಂದು ನಾನು ಪ್ರಸ್ತಾಪಿಸಿದ್ದೇನೆ. ಆದರೆ ಅವರು ಆ ಬಗ್ಗೆ ಗಮನ ಹರಿಸುವ ಬದಲು ಈಗ ರಾಜ್ಯದಲ್ಲಿ ಮುಸ್ಲಿಂ ಮತದಾರರನ್ನು ಪ್ರಚೋದಿಸಲು ಬಂದಿದ್ದಾರೆ. ಅವರು ಅವರು 300 ಮಂದಿ ಸ್ಪರ್ಧಿಸಿದರೂ 40 ಸ್ಥಾನಗಳನ್ನು ಪಡೆಯುತ್ತಾರೆಯೇ ಎಂದು ನನಗೆ ಅನುಮಾನವಿದೆ" ಎಂದು ಮಮತಾ ಬ್ಯಾನರ್ಜಿ ಹೇಳಿದ್ದಾರೆ.

ಕೋಲ್ಕತ್ತಾದಲ್ಲಿ ನಡೆದ ಧರಣಿಯಲ್ಲಿ ಮಾತನಾಡಿದ ಬ್ಯಾನರ್ಜಿ, ಪಶ್ಚಿಮ ಬಂಗಾಳದಲ್ಲಿ ಮುಂಬರುವ ಲೋಕಸಭೆ ಚುನಾವಣೆಗೆ ಕಾಂಗ್ರೆಸ್‌ನೊಂದಿಗೆ ಮೈತ್ರಿ ಮಾಡಿಕೊಳ್ಳಲು ನಮ್ಮ ಪಕ್ಷವು ಸಿದ್ಧವಾಗಿದೆ. ಆದರೆ ನಮ್ಮ ಪ್ರಸ್ತಾಪವನ್ನು ಅತ್ಯಂತ ಹಳೆಯ ಪಕ್ಷ ನಿರಾಕರಿಸಿದ ಎಂದರು.

# ಸಮಯದಲ್ಲಿ ಬದಲಾವಣೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಫೆಬ್ರವರಿ 3ರಂದು ನೂತನ ಬಸ್‌ಗಳ ಲೋಕಾರ್ಪಣೆ, ಅಪಘಾತ ರಹಿತ ಚಾಲಕರಿಗೆ ಬೆಳ್ಳಿ ಪದಕ ವಿತರಣೆ ಹಾಗೂ ಸ್ಥಳೀಯ ಬಸ್‌ಗಳಲ್ಲಿ ನಗದು ರಹಿತ ವ್ಯವಸ್ಥೆ ಜಾರಿಗೊಳಿಸುವ ಸಮಾರಂಭದ ಸಮಯವು ಕಾರಣಾಂತರಗಳಿಂದ ಮಧ್ಯಾಹ್ನ 12.30 ಗಂಟೆಯ ಬದಲಾಗಿ ಸಂಜೆ 5.30 ಗಂಟೆಗೆ ಹಮ್ಮಿಕೊಳ್ಳಲಾಗಿದೆ ಎಂದು ವಾ.ಕ.ರ.ಸಾ.ಸಂಸ್ಥೆಯ ವಿಭಾಗೀಯ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಮಸಮಾಜ ನಿರ್ಮಾಣಕ್ಕಾಗಿ ಕಾವ್ಯದ ಅಸ್ತ್ರವೆತ್ತಿದ ನಾಡೋಜ ಡಾ.ಸಿದ್ದಲಿಂಗಯ್ಯ

# ಕವನಗಳನ್ನೇ ಖಡ್ಗವಾಗಿಸಿದ ಯುಗದ ಕವಿ

'ನಾನು ಸತ್ತರೆ ನೀವು ಅಳುವಿರಿ
ನಿಮ್ಮ ಕೂಗು ನನಗೆ ಕೇಳಿಸದು
ನನ್ನ ನೋವಿಗೆ ಈಗಲೇ ಮರುಗಲಾಗದೇ..?

ನೀವು ಹೂಮಾಲೆ ಹೊದಿಸುವಿರಿ
ನೋಡಲಾದೀತೇನು ನನಗೆ
ಚೆಂದನೆಯ ಹೂವೊಂದ ಈಗಲೇ
ನೀಡಲಾಗದೇ..?

ನನ್ನ ಗುಣಗಾನ ಮಾಡುವಿರಿ
ನನಗೆ ಕೇಳೀತೇ ಹೇಳಿ
ಒಂದೆರಡು ಹೊಗಳಿಕೆಯ ಮಾತು
ಈಗಲೇ ಆಡಲಾರಿರೇ..?


ನನ್ನ ತಪ್ಪುಗಳನ್ನು ಮನ್ನಿಸುವಿರಿ
ನನಗರಿವಾಗುವುದೇ ಇಲ್ಲ
ಜೀವ ಇರುತ್ತಾ ಕ್ಷಮಿಸಲಾಗದೇ..?

ನನ್ನ ಅನುಪಸ್ಥಿತಿಗೆ ಕೊರಗುವಿರಿ
ನನಗೆ ತಿಳಿಯುವುದೇ ಇಲ್ಲ
ಈಗಲೇ ಭೇಟಿ ಮಾಡಲೇನು..?

ನನ್ನ ನಿರ್ಗಮನದ ಸುದ್ದಿ ತಿಳಿಯುತ್ತಲೇ ಮನೆಯತ್ತ ಧಾವಿಸುವಿರಿ
ಶ್ರದ್ಧಾಂಜಲಿ ಹೇಳೋ ಬದಲು ಈವಾಗಲೇ
ಸುಖ-ದುಃಖ ಹಂಚಿಕೊಳ್ಳಲಾಗದೇನು..?

ಮಿಂಚಿ ಹೋಗುವ ಮುನ್ನ ಹಂಚಿ
ಬಾಳುವ ಬದುಕು ಸಹ್ಯವಲ್ಲವೇನು..?

ಆದುನಿಕ ಜಗತ್ತಿನ ಎಲ್ಲ ಅಪಸವ್ಯಗಳ ನಡುವೆ ನಮ್ಮ ಬದುಕು ಬದುಕಲು ಬೆಳಕಿನಂತೆ ಕಾಣುವ,ಕಾಡುವ ಈ ಮೇಲಿನ ಸಾಲುಗಳು ಅದೆಷ್ಟು ಪ್ರಸ್ತುತವಲ್ಲವೇ? ಭಾವ ತುಂಬಿದ ಭಾವತೀವ್ರತೆಯ ಪ್ರತಿ ಸಾಲು ನಮ್ಮೊಳಗಿನ ಸಂವೇದನಾಶೀಲತೆಯನ್ನು ಜಾಗೃತಗೊಳಿಸುತ್ತವೆ. ಇಂದು ಇಂತಹ ಸಾವಿರ ಸಾವಿರ ಸಾಲುಗಳ ಮೂಲಕ 'ಮಿಂಚಿ ಹೋಗುವ ಮುನ್ನ ಹಂಚಿ ಬಾಳುವ' ಪಾಠ ಮಾಡಿದ ಜನತೆಯ ಕವಿ, ಜಾಗೃತಿಯ ಕವಿ, ಹೋರಾಟದ ಕವಿ, ದಲಿತ ಕವಿ ನಾಡೋಜ ಡಾ.ಸಿದ್ದಲಿಂಗಯ್ಯನವರ ಜನ್ಮದಿನ.



ವಿದ್ಯಾರ್ಥಿ ದೆಸೆಯಿಂದಲೇ ಸಮಾಜದಲ್ಲಿನ ಅಸಮಾನತೆಗಳ ತಮ್ಮೊಳಗೆ ಮೊಳೆಯೊಡೆಯುತ್ತಿದ್ದ ಸಿಟ್ಟು, ಆಕ್ರೋಶಗಳನ್ನು ವ್ಯಕ್ತಪಡಿಸಲು ಸಿದ್ದಲಿಂಗಯ್ಯಅವರು ಆಯ್ದುಕೊಂಡದ್ದು ಕಾವ್ಯ ಮಾಧ್ಯಮ. ಹೀಗೆ ಅವರು ಬರೆದ ಹಲವಾರು ಕವನಗಳ ಸಂಕಲನ 'ಹೊಲೆಮಾದಿಗರ ಹಾಡು' 1975ರಲ್ಲಿ ಪ್ರಕಟಗೊಂಡಿತು. ಸಾವಿರಾರು ನದಿಗಳು, ಕಪ್ಪುಕಾಡಿನ ಹಾಡು, ಮೆರವಣಿಗೆ, ನನ್ನ ಜನಗಳು ಮತ್ತು ಇತರ ಕವಿತೆಗಳು ಮುಂತಾದ ಕವನ ಸಂಕಲನಗಳು ಪ್ರಕಟಗೊಂಡವು.

ಕರ್ನಾಟಕ ವಿಧಾನ ಪರಿಷತ್‌ನ ಸದಸ್ಯರಾಗಿ 1988-94, 1995-2001ರವರೆಗೆ ಎರಡು ಬಾರಿ ಕಾರ್ಯನಿರ್ವಹಿಸಿ ಕನ್ನಡ ನಾಡು-ನುಡಿಯ ಸಾರ್ಥಕ ಸೇವೆಯನ್ನು ಸಮರ್ಪಿಸಿದ್ದರು. ಜತೆಗೆ ಕನ್ನಡ ಅಭಿವೃದ್ಧಿ ಪ್ರಾಧಿಕಾರದಲ್ಲಿ 2006-08 ಅವಧಿಯಲ್ಲಿ ಅಧ್ಯಕ್ಷರಾಗಿ ಸೇವೆ ಸಲ್ಲಿಸಿ ಕನ್ನಡದ ಮರೆತ ಹಲವು ಮಜಲುಗಳಿಗೆ ಜೀವ ತುಂಬುವ ಕಾರ್ಯ ಕೈಗೊಂಡರು. ನಂತರ ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷರಾಗಿ ಕನ್ನಡ ಪುಸ್ತಕ ಪರಂಪರೆಯನ್ನು ಮತ್ತಷ್ಟು ಶ್ರೀಮಂತಗೊಳಿಸಿದರು.

'ಇಕ್ರಲಾ.. ವದೀರ್ಲಾ.. ಈ ನನ್ ಮಕ್ಕಳ್ ಚರ್ಮಾ ಎಬ್ರಲಾ..'ಎಂಬ ಬೆಂಕಿಯ ನುಡಿಗಳ ಮೂಲಕ ಸಮುದಾಯದ ನೋವು-ಅಸಹನೆಗಳಿಗೆ ದನಿಯಾಗಿ ನಿಂತವರು ಡಾ.ಸಿದ್ದಲಿಂಗಯ್ಯ. ತಮ್ಮೆಲ್ಲ ಆಕ್ರೋಶವನ್ನು ಕವನಗಳನ್ನೇ ಖಡ್ಗವಾಗಿಸುವ ಮೂಲಕ ಸಮಾಜದ ಮನದಾಳದಲ್ಲಿ ಮಡುಗಟ್ಟಿದ ಆಕ್ರೋಶಗಳಿಗೆ, ದಲಿತ-ದಮನಿತರ ನೋವುಗಳಿಗೆ ಸಮರ್ಥ ದನಿಯಾಗಿ ಹೋರಾಡಿದವರು. ಸತ್ವಪೂರ್ಣ ಕಾವ್ಯಾಭಿವ್ಯಕ್ತಿಯ ಮೂಲಕ ತನ್ನ ಒಡಲಾಳದ ಸಿಟ್ಟು ಹೊರಹಾಕಿ ಒಂದು ತಲೆಮಾರನ್ನು ಜಾಗೃತಗೊಳಿಸಿದ ನೊಂದವರ ಬಂಧು ಡಾ.ಸಿದ್ದಲಿಂಗಯ್ಯನವರು.

ಸಿದ್ದಲಿಂಗಯ್ಯನವರು 1954ರ ಫೆಬ್ರವರಿ 3ರಂದು ದೇವಯ್ಯ ಮತ್ತು ವೆಂಕಟಮ್ಮನವರ ಪುತ್ರರಾಗಿ ರಾಮನಗರ ಜಿಲ್ಲೆಯ ಮಾಗಡಿ ತಾಲೂಕಿನ ಮಂಚನಬೆಲೆಯಲ್ಲಿ ಜನಿಸಿದರು. 1976ರಲ್ಲಿ ಬೆಂಗಳೂರು ವಿಶ್ವವಿದ್ಯಾನಿಲಯದಿಂದ ಪ್ರೊ. ಡಿ.ಎಲ್. ನರಸಿಂಹಾಚಾರ್ಯರ ಸ್ವರ್ಣಪದಕದೊಂದಿಗೆ ಪ್ರಥಮ ಶ್ರೇಣಿಯಲ್ಲಿ ಎಂ.ಎ ಪದವಿ ಪಡೆದು ಸಾಧನೆ ಮಾಡಿದವರು. ಬೆಂಗಳೂರು ವಿಶ್ವವಿದ್ಯಾನಿಲಯದಲ್ಲಿ ಪ್ರಾಧ್ಯಾಪಕರಾಗಿ, ಕನ್ನಡ ಅಧ್ಯಯನ ಕೇಂದ್ರದ ನಿರ್ದೇಶಕರಾಗಿಯೂ ಕಾರ್ಯನಿರ್ವಹಿಸಿದರು.

ಪುಟ್ಟಣ್ಣ ಕಣಗಾಲರು ನಿರ್ದೇಶಿಸಿದ 'ಧರಣಿಮಂಡಲ ಮಧ್ಯದೊಳಗೆ' ಚಿತ್ರಕ್ಕೆ ಸಿದ್ದಲಿಂಗಯ್ಯ ಅವರು ಬರೆದ ಗೀತೆಗೆ 1983-84ರಲ್ಲಿ ರಾಜ್ಯಪ್ರಶಸ್ತಿ ಸಂದಿತ್ತು. ಪಣಜಿಯಲ್ಲಿ ನಡೆದ ಭಾರತೀಯ ಕನ್ನಡ ಸಮ್ಮೇಳನದ ಅಧ್ಯಕ್ಷತೆ, ಗೋರೆಗಾಂವ್‌ನ 'ವಿಚಾರ ಭಾರತಿ ಸಮ್ಮೇಳನ'ದ ಅಧ್ಯಕ್ಷತೆ, ಬೆಂಗಳೂರು ಗ್ರಾಮಾಂತರ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷತೆ, ಬೀದರ್‌ನಲ್ಲಿ ನಡೆದ ಶರಣ ಸಮ್ಮೇಳನದ ಅಧ್ಯಕ್ಷತೆ, ಮತ್ತು ಹಂಪಿ ಉತ್ಸವ, ಮೈಸೂರು ದಸರಾ ಮಹೋತ್ಸವ, ದಿಲ್ಲಿಯಲ್ಲಿ ನಡೆದ ದಕ್ಷಿಣ ಪ್ರಾಂತೀಯ ಸಮ್ಮೇಳನದಲ್ಲಿ ಕವಿಗೋಷ್ಠಿಯ ಅಧ್ಯಕ್ಷತೆ, ಆಳ್ವಾಸ್ ನುಡಿಸಿರಿ ಸಮ್ಮೇಳನ ಹಾಗೂ ಶ್ರವಣಬೆಳಗೊಳದಲ್ಲಿ 81ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷತೆ ಮುಂತಾದ ಗೌರವಗಳು ಸಿದ್ದಲಿಂಗಯ್ಯನ ಅವರನ್ನು ಅರಸಿ ಬಂದಿದ್ದವು.

ಸಿದ್ದಲಿಂಗಯ್ಯ ಅವರ ಸೃಜನಶೀಲ ಸಾಹಿತ್ಯ ಸಾಧನೆಗಾಗಿ ರಾಜ್ಯೋತ್ಸವ ಪ್ರಶಸ್ತಿ, ಡಾ। ಅಂಬೇಡ್ಕರ್ ಶತಮಾನೋತ್ಸವ ವಿಶೇಷ ಪ್ರಶಸ್ತಿ, ಕರ್ನಾಟಕ ಸಾಹಿತ್ಯ ಅಕಾಡೆಮಿ ಪ್ರಶಸ್ತಿ, ಜಾನಪದ ತಜ್ಞ ಪ್ರಶಸ್ತಿ, ಡಾ। ಅಂಬೇಡ್ಕರ್ ಪ್ರಶಸ್ತಿ, ಸತ್ಯಕಾಮ ಪ್ರತಿಷ್ಠಾನ ಪ್ರಶಸ್ತಿ, ಬಾಬು ಜಗಜೀವನ ರಾಮ್ ಪ್ರಶಸ್ತಿ, ಹಂಪಿ ವಿಶ್ವವಿದ್ಯಾನಿಲಯದ ನಾಡೋಜ ಪ್ರಶಸ್ತಿ ಹಾಗೂ ಪದ್ಮಶ್ರೀ ಪ್ರಶಸ್ತಿ ಮುಂತಾದ ಗೌರವಗಳು ಸಂದಿದ್ದವು.

ಬದುಕಿರುವರೆಗೂ ಬದುಕಲ್ಲಿ ನೊಂದವರ ಬಂಧುವಾಗಿ ಬದುಕಿದ ಧೀಮಂತ ಕವಿ



ಸಿದ್ದಲಿಂಗಯ್ಯನವರು 11ನೇ ಜೂನ್ 2021ರಂದು 67ನೇ ವಯಸ್ಸಿನಲ್ಲಿ ತಮ್ಮ ಇಹಲೋಕ ಯಾತ್ರೆಯನ್ನು ಕೊನೆಗೊಳಿಸಿದರು. ಕೊನೆಯವರೆಗೂ ಅವರು ನೀಡಿದ ಚಿಂತನಶೀಲ, ಚಲನಶೀಲ ವಿಚಾರಗಳು ಇಂದಿಗೂ ಅವರ ಪ್ರಸ್ತುತತೆಯನ್ನು ಸಾರಿ ಹೇಳುತ್ತವೆ.

**- ಈಶ್ವರ ಎಸ್.ಮೆಡ್ಲೇರಿ.**
**ಅಧ್ಯಕ್ಷರು, ಕಸಾಪ-ಲಕ್ಷ್ಮೇಶ್ವರ.**

# ಸೈನಿಕರನ್ನು ಗೌರವದಿಂದ ಕಾಣಬೇಕು



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸೈನಿಕರು ನಮ್ಮ ದೇಶದ ಸುಭದ್ರತೆ ಮತ್ತು ಸ್ಥಿರತೆಯ ಆಧಾರ ಸ್ತಂಭವಾಗಿದ್ದು, ದೇಶದ ಪ್ರತಿಯೊಬ್ಬ ಪ್ರಜೆಯೂ ಸೈನಿಕರನ್ನು ಅತ್ಯಂತ ಗೌರವದಿಂದ ಕಾಣಬೇಕು ಎಂದು ಲಕ್ಷ್ಮೇಶ್ವರ ತಾಲೂಕು ಮಾಜಿ ಸೈನಿಕರ ಸಂಘದ ಅಧ್ಯಕ್ಷ ವಿ.ಎಸ್. ಹಿರೇಮಠ ಹೇಳಿದರು.

22 ವರ್ಷಗಳ ಕಾಲ ಭಾರತೀಯ ಸೇನೆಯಲ್ಲಿ ಸೇವೆ ಸಲ್ಲಿಸಿ, ಸೇವಾ ನಿವೃತ್ತಿ ಹೊಂದಿ ಪಟ್ಟಣಕ್ಕೆ ಆಗಮಿಸಿದ ದೇವೇಂದ್ರಪ್ಪ ನವಲಗುಂದ ಅವರನ್ನು ಪಟ್ಟಣದ ಜನತೆ, ಮಾಜಿ ಸೈನಿಕರು ಸನ್ಮಾನಿಸಿದ ಸಂದರ್ಭದಲ್ಲಿ ಅವರು ಮಾತನಾಡಿದರು.

ಕೆಸಿಸಿ ಬ್ಯಾಕ್ ಮಾಜಿ ನಿರ್ದೇಶಕ ಸುನೀಲ ಮಹಾಂತಶೆಟ್ಟರ ಮಾತನಾಡಿ, ಸೈನಿಕರ ಧೈರ್ಯ, ತ್ಯಾಗ, ಬದ್ಧತೆ, ದೇಶದ ಬಗೆಗಿನ ಅಭಿಮಾನ-ಸ್ವಾಭಿಮಾನ ಪ್ರಶಂಸನೀಯ. ದೇಶದ ಸುರಕ್ಷತೆ ಮತ್ತು ಸಾರ್ವಭೌಮತ್ವ ಕಾಪಾಡುವ ನಿಟ್ಟಿನಲ್ಲಿ ಅವರಲ್ಲಿನ ಶೌರ್ಯ-ಸಮರ್ಪಣಾ ಮನೋಭಾವಕ್ಕೆ ಎಲ್ಲರೂ ತಲೆ ಬಾಗಲೇಬೇಕು ಎಂದರು.

ಪಟ್ಟಣದ ಸೋಮೇಶ್ವರ ದೇವಸ್ಥಾನದಿಂದ ಪ್ರಮುಖ ಮಾರ್ಗದಲ್ಲಿ ನಿವೃತ್ತ ಸೈನಿಕನ ಮೆರವಣಿಗೆ ನಡೆಸಿ, ಜಯಘೋಷ ಕೂಗಿದರು. ಈ ವೇಳೆ ಡಾ. ಅನಿಲಕುಮಾರ ಮಹಾಂತಶೆಟ್ಟರ, ಯಲ್ಲಪ್ಪ ಯಲಗಚ್ಚಿ, ಯಲ್ಲಪ್ಪ ಬಿಂಜಡಗಿ, ಮಲ್ಲೇಶಪ್ಪ ಅತಾಕುಂಟಿ, ಹನಮಂತಪ್ಪ ಕೋರದಾಳ, ತಿರಕಪ್ಪ ಯಲಗಚ್ಚಿ, ಕೆ.ಓ. ಹುಲಿಕಟ್ಟಿ, ರಾಜು ಕಳ್ಳಿ, ಹನಮಂತಪ್ಪ ದೊಡ್ಡಮನಿ, ಸೋಮು ನವಲಗುಂದ, ಆರ್. ಎಚ್. ನರೇಗಲ್, ಆಯ್.ಎಸ್. ಮುದಗಲ್, ನಾಗರಾಜ ಕಟ್ಟಿಮನಿ ಸೇರಿ ಹಲವರಿದ್ದರು.


# ಬಸ್ ಮಂಜೂರಾತಿಗಾಗಿ ಮನವಿ

**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ತಾಲೂಕಿಗೆ ಸಮರ್ಪಕ ಸಾರಿಗೆ ಸೌಲಭ್ಯ ಒದಗಿಸುವುದಕ್ಕಾಗಿ 20 ನೂತನ ಬಸ್‌ಗಳನ್ನು ಮಂಜೂರು ಮಾಡುವಂತೆ ಆಗ್ರಹಿಸಿ ತಹಸೀಲ್ದಾರ ಮೂಲಕ ಸಾರಿಗೆ ಇಲಾಖೆಯ ವ್ಯವಸ್ಥಾಪಕ ನಿರ್ದೇಶಕರಿಗೆ ಮತ್ತು ಸಚಿವ ರಾಮಲಿಂಗಾರೆಡ್ಡಿ ಮತ್ತು ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಸಂತೋಷ ಕುರಿ, ಶಿರಹಟ್ಟಿ ತಾಲೂಕು ಹಿಂದುಳಿದ ಪ್ರದೇಶವಾಗಿದ್ದು, ಸತತ ಹೋರಾಟಗಳಿಂದ 3 ವರ್ಷಗಳ ಹಿಂದೆ ಡೀಪೋ ಪ್ರಾರಂಭವಾಗಿದೆ. ಇಲ್ಲಿಯವರೆಗೂ ಸರಿಯಾದ ಬಸ್‌ಗಳ ವ್ಯವಸ್ಥೆಯಿಲ್ಲ. ಕೆಲವು ಪ್ರದೇಶಗಳಿಗೆ ಬಸ್ ಸಂಚಾರವೇ ಇಲ್ಲಾದ್ದರಿಂದ, ಹೊಸ 20 ಬಸ್‌ಗಳನ್ನು ಡೀಪೋಗೆ ಮಂಜೂರು ಮಾಡಬೇಕು ಎಂದು ವಿನಂತಿಸಿದರು.

ಚಂದ್ರಶೇಖರ ಜೋಗೇರ, ಜಗದೀಶ ಇಟ್ಟೇಕಾರ, ಬಸವರಾಜ ತಳವಾರ, ಮಂಜುನಾಥ ಗಾರವಾಡ, ಮುತ್ತು ಗೂಳಪ್ಪನವರ, ಫಕ್ಕೀರೇಶ ವರವಿ, ಹನುಮಂತಪ್ಪ ಕೊಡ್ಲಿ, ಶೃಣಪ್ಪ ಬಳೂಟಗಿ, ಷಣ್ಮುಖ ಗೌಳಿ, ಪ್ರವೀಣ ಹಾಲಪ್ಪನವರ, ಸಣ್ಣಪ್ಪ ವಾಲೀಕಾರ, ಬಸವರಾಜ ಬಕ್ಕಸದ, ನಾಗರಾಜ ಜೋಗೇರ, ಲಕ್ಷ್ಮಣ ಗೂಳಪ್ಪನವರ, ನಾಗರಾಜ ಜೋಗೇರ, ಲಕ್ಷ್ಮಣ ಗೂಳಪ್ಪನವರ, ಪರಶುರಾಮ ಹಾಲಪ್ಪನವರ, ನಿಂಗಪ್ಪ ಮೇಗೂರ, ಆನಂದ ಘಂಟಿ, ಚಂದ್ರು ಜಿಡಗಣ್ಣವರ ಉಪಸ್ಥಿತರಿದ್ದರು.




# ರಾಜ್ಯ ಮಟ್ಟದ ಯೋಗಾಸನ ಸ್ಪರ್ಧೆಯಲ್ಲಿ ಸಾಧನೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಶ್ರೀ ಜಗದ್ಗುರು ತೋಂಟದಾರ್ಯ ಶಾಖಾಮಠ ಶಿರೋಳದ ನೂತನ ಪೀಠಾಧಿಪತಿಗಳಾದ ಪೂಜ್ಯಶ್ರೀ ಶಾಂತಲಿಂಗ ಮಹಾಸ್ವಾಮಿಗಳವರ ಸನ್ನಿಧಿಯಲ್ಲಿ ಗುರುಬಸವ ಜನಕಲ್ಯಾಣ ಸಂಸ್ಥೆಯ ಶ್ರೀ ಹಂಪಸಾಗರ ಪರ್ವತ ಮರಿದೇವರ ಸ್ಮಾರಕ ಯೋಗ ವ್ಯಾಯಾಮ ಹಾಗೂ ಕ್ರೀಡಾ ಸಂಘ ಶಿರೋಳ, ಶ್ರೀ ಜಗದ್ಗುರು ತೋಂಟದಾರ್ಯ ಜಾತ್ರಾ ಮಹೋತ್ಸವ ಸಮಿತಿ-2024 ಶಿರೋಳ ಇವರ ಸಹಯೋಗದೊಂದಿಗೆ 'ನಮ್ಮೂರ ರೊಟ್ಟಿ ಜಾತ್ರೆ' ಅಂಗವಾಗಿ ಯೋಗಗುರು ದಿ. ರುದ್ರಪ್ಪ ಜಿ.ಕೊಣ್ಣೂರ ಸ್ಮರಣಾರ್ಥವಾಗಿ ರಾಜ್ಯಮಟ್ಟದ ಮುಕ್ತ ಯೋಗಾಸನ ಸ್ಪರ್ಧೆ ಆಯೋಜಿಸಿತ್ತು.

ಈ ಸ್ಪರ್ಧೆಯಲ್ಲಿ ಎಸ್. ವಾಯ್.ಬಿ.ಎಂ.ಎಸ್, ಯೋಗ ಪಾಠಶಾಲೆಯ ಬಸವ ಯೋಗ ಕೇಂದ್ರದ ಪ್ರಾಚಾರ್ಯ ಕೆ.ಎಸ್. ಪಲ್ಲೇದ 25 ವರ್ಷ ಮೇಲ್ಪಟ್ಟ ಪುರುಷರ ವಿಭಾಗದಲ್ಲಿ ದ್ವಿತೀಯ ಸ್ಥಾನ ಪಡೆದು 'ಕರುನಾಡ ಯೋಗ ರತ್ನ' ಪ್ರಶಸ್ತಿಗೆ ಭಾಜನರಾದರು. ಸರ್ಟಿಫಿಕೇಟ್ ಕೋಸ್ ಇನ್ ಯೋಗ ಸ್ಟಡೀಸ್‌ನ ವಿದ್ಯಾರ್ಥಿನಿ ಸಂಜನಾ ವಾಯ್.ಸಜ್ಜನರ 18ರಿಂದ 25 ವರ್ಷ ವಯೋಮಿತಿಯ ಯುವತಿಯರ ವಿಭಾಗದಲ್ಲಿ 5ನೇ ಸ್ಥಾನ ಗಳಿಸಿದ್ದಾರೆ.

ಯೋಗಾಸನ ಸ್ಪರ್ಧೆಯಲ್ಲಿ ಯಶಸ್ಸು ಸಾಧಿಸಿದ ಕೆ.ಎಸ್. ಪಲ್ಲೇದ ಮತ್ತು ಸಂಜನಾ ಸಜ್ಜನರರನ್ನು ಬಸವ ಯೋಗ ಕೇಂದ್ರದ ಆಡಳಿತಾಧಿಕಾರಿ ಎಸ್.ಎಸ್. ಪಟ್ಟಣಶೆಟ್ಟಿ, ಸಿದ್ಧಲಿಂಗ ನಗರದ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಅಧ್ಯಕ್ಷೆ ಜಯಶ್ರೀ ವಸ್ತ್ರದ, ಗದಗ ಜಿಲ್ಲಾ ಯೋಗ ಒಕ್ಕೂಟದ ಅಧ್ಯಕ್ಷ ಎಂ.ಎಸ್. ಶಿರಿಯಣ್ಣವರ, ಗದಗ ಜಿಲ್ಲಾ ಅಮೇಚೂರ್ ಯೋಗಾಸನ ಕ್ರೀಡಾ ಸಂಸ್ಥೆಯ ಕಾರ್ಯದರ್ಶಿ ಚೇತನ ಚುಂಚಾ, ಯೋಗ ಪಾಠಶಾಲೆಯ ಕಾರ್ಯಕರ್ತರಾದ ಡಾ. ಎಂ.ವಿ. ಐಹೊಳ್ಳಿ, ವಿ.ಎಂ. ಮುಂದಿನಮನಿ, ಸಿಬ್ಬಂದಿ ವರ್ಗ ಮತ್ತು ಯೋಗ ಸಾಧಕರು ಅಭಿನಂದಿಸಿದ್ದಾರೆ.

## ಜನತಾ ದರ್ಶನಗಳಲ್ಲಿ ಒಟ್ಟು 1243 ಅಹವಾಲುಗಳು ಸ್ವೀಕೃತ: ಜಿಲ್ಲಾಧಿಕಾರಿ ದಿವ್ಯ ಪ್ರಭು

# ಬಾಕಿ ಅರ್ಜಿಗಳ ವಿಲೇವಾರಿಗೆ ಕ್ರಮ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**



ರಾಜ್ಯ ಸರ್ಕಾರವು ಸಾರ್ವಜನಿಕರ ಸಮಸ್ಯೆ, ಅಹವಾಲು, ಅರ್ಜಿಗಳನ್ನು ಸ್ಥಳದಲ್ಲಿಯೇ ಪರಿಶೀಲಿಸಿ ಸೂಕ್ತ ಕ್ರಮ ವಹಿಸಲು ಮತ್ತು ನೊಂದವರ ನೇರವಿಗೆ ತಕ್ಷಣ ಆಡಳಿತ ಯಂತ್ರ ತರಲು ಅನುವಾಗುವಂತೆ ಜಿಲ್ಲಾ ಮತ್ತು ರಾಜ್ಯ ಮಟ್ಟದಲ್ಲಿ ಜನತಾ ದರ್ಶನ ಕಾರ್ಯಕ್ರಮಗಳನ್ನು ಆಯೋಜಿಸಲು ಜಿಲ್ಲಾಡಳಿತಕ್ಕೆ ನಿರ್ದೇಶಿಸಿದೆ. ಅದರಂತೆ ಧಾರವಾಡ ಜಿಲ್ಲೆಯಲ್ಲಿ ಇಲ್ಲಿಯವರೆಗೆ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ನಾಲ್ಕು ಜನತಾ ದರ್ಶನ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಸಂಘಟಿಸಲಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದ್ದಾರೆ.

ಸೆಪ್ಟೆಂಬರ್ 25, 2023ರಂದು ಧಾರವಾಡ ಸೃಜನಾ ರಂಗ ಮಂದಿರದಲ್ಲಿ ಆಯೋಜಿಸಿದ್ದ ಮೊದಲ ಜನತಾ ದರ್ಶನ ಕಾರ್ಯಕ್ರಮದಲ್ಲಿ ಸಾರ್ವಜನಿಕರಿಂದ 450 ಅಹವಾಲುಗಳನ್ನು ಸ್ವೀಕರಿಸಲಾಗಿತ್ತು. ಈ ಎಲ್ಲ ಅಹವಾಲುಗಳನ್ನು ನಿಯಮಾನುಸಾರ ಪರಿಶೀಲಿಸಿ, ಇತ್ಯರ್ಥಪಡಿಸಿ ವಿಲೇವಾರಿ ಮಾಡಲಾಗಿದೆ.

ಅಕ್ಟೋಬರ್ 6, 2023ರಂದು ಧಾರವಾಡ ಸೃಜನಾ ರಂಗ ಮಂದಿರದಲ್ಲಿ ಆಯೋಜಿಸಿದ್ದ 2ನೇ ಜನತಾ ದರ್ಶನ ಕಾರ್ಯಕ್ರಮದಲ್ಲಿ ಸಾರ್ವಜನಿಕರಿಂದ 197 ಅಹವಾಲುಗಳನ್ನು ಸ್ವೀಕರಿಸಲಾಗಿತ್ತು. ಈ ಎಲ್ಲ ಅಹವಾಲುಗಳನ್ನು ನಿಯಮಾನುಸಾರ ಪರಿಶೀಲಿಸಿ, ಇತ್ಯರ್ಥಪಡಿಸಿ ವಿಲೇವಾರಿ ಮಾಡಲಾಗಿದೆ. ಡಿಸೆಂಬರ್ 23, 2023 ರಂದು ಧಾರವಾಡ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಆಯೋಜಿಸಿದ್ದ 3ನೇ ಜನತಾ ದರ್ಶನ ಕಾರ್ಯಕ್ರಮದಲ್ಲಿ ಸಾರ್ವಜನಿಕರಿಂದ 177 ಅಹವಾಲುಗಳನ್ನು ಸ್ವೀಕರಿಸಲಾಗಿತ್ತು. ಈ ಪೈಕಿ 175 ಅಹವಾಲುಗಳನ್ನು ನಿಯಮಾನುಸಾರ ಪರಿಶೀಲಿಸಿ, ಇತ್ಯರ್ಥಪಡಿಸಲಾಗಿದೆ ಮತ್ತು ಬಾಕಿ ಇರುವ 2 ಅರ್ಜಿಗಳು ಕಾಲಮಿತಿಯಲ್ಲಿವೆ. ಅವುಗಳನ್ನು ಸಹ ತ್ವರಿತಗತಿಯಲ್ಲಿ ನಿಯಮಾನುಸಾರ ವಿಲೇವಾರಿ ಮಾಡಲು ಕ್ರಮ ವಹಿಸಲಾಗುತ್ತದೆ.

ಜನವರಿ 29, 2024ರಂದು ಧಾರವಾಡ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಆಯೋಜಿಸಿದ್ದ 4ನೇ ಜನತಾ ದರ್ಶನ ಕಾರ್ಯಕ್ರಮದಲ್ಲಿ ಸಾರ್ವಜನಿಕರಿಂದ 112 ಅಹವಾಲುಗಳನ್ನು ಸ್ವೀಕರಿಸಲಾಗಿತ್ತು. ಈ ಪೈಕಿ 62 ಅಹವಾಲುಗಳನ್ನು ನಿಯಮಾನುಸಾರ ಪರಿಶೀಲಿಸಿ, ಇತ್ಯರ್ಥಪಡಿಸಲಾಗಿದೆ ಮತ್ತು ಬಾಕಿ ಇರುವ 50 ಅರ್ಜಿಗಳು ಕಾಲಮಿತಿಯಲ್ಲಿವೆ. ಅವುಗಳನ್ನು ಸಹ ತ್ವರಿತಗತಿಯಲ್ಲಿ ನಿಯಮಾನುಸಾರ ವಿಲೇವಾರಿ ಮಾಡಲು ಕ್ರಮ ವಹಿಸಲಾಗುತ್ತದೆ.

ತಾಲೂಕಾ ಮಟ್ಟದ ಜನತಾ ದರ್ಶನ: ಸರ್ಕಾರದ ನಿರ್ದೇಶನದಂತೆ ಧಾರವಾಡ ಜಿಲ್ಲಾಧಿಕಾರಿಗಳು ತಾಲೂಕಾ ಮಟ್ಟದ ಜನತಾ ದರ್ಶನ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಮೊದಲ ಜನತಾ ದರ್ಶನ ಕಾರ್ಯಕ್ರಮವನ್ನು ಅಕ್ಟೋಬರ್ 20, 2023ರಂದು ಅಣ್ಣಿಗೇರಿಯಲ್ಲಿ ಜರುಗಿಸಿ, ಸಾರ್ವಜನಿಕರಿಂದ ಸ್ವೀಕರಿಸಿದ್ದ 124 ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ ಪರಿಹರಿಸಿದ್ದಾರೆ.

2ನೇ ಜನತಾ ದರ್ಶನ ಕಾರ್ಯಕ್ರಮವನ್ನು ನವೆಂಬರ್ 28, 2023ರಂದು ಅಳ್ನಾವರದಲ್ಲಿ ಜರುಗಿಸಿ, ಸಾರ್ವಜನಿಕರಿಂದ ಸ್ವೀಕರಿಸಿದ್ದ 47 ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ ಪರಿಹರಿಸಿದ್ದಾರೆ. 3ನೇ ಜನತಾ ದರ್ಶನ ಕಾರ್ಯಕ್ರಮವನ್ನು ಡಿಸೆಂಬರ್ 30, 2023ರಂದು ಧಾರವಾಡದಲ್ಲಿ ಜರುಗಿಸಿ, ಸಾರ್ವಜನಿಕರಿಂದ ಸ್ವೀಕರಿಸಿದ್ದ 31 ಅರ್ಜಿಗಳ ಪೈಕಿ 30 ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ ಪರಿಹರಿಸಿದ್ದಾರೆ. ಬಾಕಿ ಇರುವ ಒಂದು ಅರ್ಜಿ ಕಾಲಮಿತಿಯಲ್ಲಿದೆ.

ಮುಖ್ಯಮಂತ್ರಿಗಳ ಜನತಾ ದರ್ಶನ: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬೆಂಗಳೂರಿನ ಕೃಷ್ಣಾ ನಿವಾಸದ ಮುಂಭಾಗದಲ್ಲಿ ನ.27, 2023ರಂದು ಆಯೋಜಿಸಿದ್ದ ರಾಜ್ಯ ಮಟ್ಟದ ಜನತಾ ದರ್ಶನ ಕಾರ್ಯಕ್ರಮದಲ್ಲಿ ಜಿಲ್ಲೆಯಿಂದ 105 ಅಹವಾಲುಗಳು ಸ್ವೀಕೃತಗೊಂಡಿದ್ದು, ಇವುಗಳ ಪೈಕಿ 101 ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ, ಪರಿಹರಿಸಲಾಗಿದೆ ಮತ್ತು ಬಾಕಿ ಇರುವ 4 ಅರ್ಜಿಗಳು ಕಾಲಮಿತಿಯಲ್ಲಿವೆ. ಅವುಗಳನ್ನು ಸಹ ತ್ವರಿತಗತಿಯಲ್ಲಿ ನಿಯಮಾನುಸಾರ ವಿಲೇವಾರಿ ಮಾಡಲು ಕ್ರಮವಹಿಸಲಾಗುತ್ತದೆ.

ವಿವಿಧ ಹಂತದ ಜನತಾದರ್ಶನ ಕಾರ್ಯಕ್ರಮಗಳಲ್ಲಿ ಜಿಲ್ಲೆಯ ಸಾರ್ವಜನಿಕರಿಂದ ಸ್ವೀಕೃತಗೊಂಡಿದ್ದ 1243 ಅರ್ಜಿಗಳನ್ನು ಜಿಲ್ಲಾಡಳಿತವು ನಿಯಮಾನುಸಾರ ಪರಿಶೀಲಿಸಿ, 1186 ಅರ್ಜಿಗಳನ್ನು ಈಗಾಗಲೇ ವಿಲೇವಾರಿ ಮಾಡಿದೆ. ಉಳಿದಿರುವ 57 ಅರ್ಜಿಗಳು ಕಾಲಮಿತಿಯಲ್ಲಿವೆ. ಅವುಗಳನ್ನು ಸಹ ನಿಯಮಾನುಸಾರ ವಿಲೇವಾರಿ ಮಾಡಲು ಕ್ರಮವಹಿಸಲಾಗುತ್ತದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಾಯಕತ್ವ ಗುಣ ಬೆಳೆಸಲು ಕ್ರೀಡೆ ಸಹಕಾರಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕ್ರೀಡೆ ವಿದ್ಯಾರ್ಥಿಗಳ ಜೀವನದ ಅವಿಭಾಜ್ಯ ಅಂಗವಾಗಿದೆ. ಪಠ್ಯ ಶಿಕ್ಷಣದೊಂದಿಗೆ ಕ್ರೀಡಾ ಚಟುವಟಿಕೆಗಳನ್ನೂ ರೂಢಿಸಿಕೊಳ್ಳುವುದರಿಂದ ದೇಹ, ಮನಸ್ಸು ಮತ್ತು ಬೌದ್ಧಿಕ ವಿಕಾಸಕ್ಕೆ ಕಾರಣವಾಗುತ್ತದೆ. ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಕ್ರೀಡಾ ಮನೋಭಾವ ಹೊಂದಬೇಕು ಎಂದು ದೈಹಿಕ ಶಿಕ್ಷಣ ಪರಿವೀಕ್ಷಣಾಧಿಕಾರಿ ಎಂ.ಎನ್. ಹವಳದ ಹೇಳಿದರು.

ಅವರು ಶುಕ್ರವಾರ ಒಡೆಯರ ಮಲ್ಲಾಪುರ ಮೊರಾರ್ಜಿ ವಸತಿ ಶಾಲೆಯಲ್ಲಿ ನಡೆದ ಕ್ರೀಡಾಕೂಟ ಉದ್ಘಾಟಿಸಿ ಮಾತನಾಡಿದರು. ಇಂದು ಕ್ರೀಡಾ ಕ್ಷೇತ್ರಕ್ಕೂ ಸರಕಾರ ಹೆಚ್ಚಿನ ಪ್ರಾಶಸ್ತ್ಯ ಮತ್ತು ಅವಕಾಶಗಳನ್ನು ನೀಡಿದ್ದು, ಪ್ರಾಥಮಿಕ ಹಂತದಲ್ಲಿಯೇ ಮಕ್ಕಳಲ್ಲಿನ ಪ್ರತಿಭೆಯನ್ನು ಗುರುತಿಸಿ ಅವರನ್ನು ತರಬೇತುಗೊಳಿಸಿ ಭವಿಷ್ಯದಲ್ಲಿ ರಾಷ್ಟ್ರಮಟ್ಟದ ಕ್ರೀಡಾಪಟುಗಳನ್ನು ನಿರ್ಮಾಣ ಮಾಡುವಲ್ಲಿ ಶಿಕ್ಷಕರ- ಪಾಲಕರ ಪಾತ್ರ ಮಹತ್ವದ್ದಾಗಿದೆ. ಶಾಲೆಯಲ್ಲಿ ಮಕ್ಕಳು ನಿರುತ್ಸಾಹ, ಖಿನ್ನತೆ, ಕೀಳರಿಮೆಯಿಂದ ಬಳಲುವುದನ್ನು ತಪ್ಪಿಸಿ ಅವರಲ್ಲೂ ಹೊಸ ಚೈತನ್ಯ, ವ್ಯಕ್ತಿತ್ವ ವಿಕಸನ, ಶಿಸ್ತು, ನಾಯಕತ್ವ ಗುಣ ಬೆಳೆಸುವಲ್ಲಿ ಕ್ರೀಡೆ ಉತ್ತಮ ಸಾಧನವಾಗಿದೆ ಎಂದರು.

ಪ್ರಾಚಾರ್ಯ ಡಿ.ಸಿ. ನರೇಗಲ್ ಮಾತನಾಡಿ, ಸದೃಢವಾದ ದೇಹದಲ್ಲಿ ಸದೃಡವಾದ ಮನಸ್ಸು ನೆಲೆಗೊಳ್ಳಲು ಕ್ರೀಡೆ ಪೂರಕವಾಗಿದೆ. ಕ್ರೀಡೆ ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ, ಪರಸ್ಪರ ಸ್ನೇಹ-ಸೌಹಾರ್ದತೆ, ನಾಯಕತ್ವ ಗುಣ ಬೆಳೆಸಿಕೊಳ್ಳಲು ಸಾಧ್ಯವಾಗುತ್ತದೆ. ಆದ್ದರಿಂದ ಪ್ರತಿಯೊಬ್ಬ ವಿದ್ಯಾರ್ಥಿಯೂ ಕೀಳರಿಮೆ, ಹಿಂಜರಿಕೆಯ ಮನಸ್ಥಿತಿಯಿಂದ ಹೊರಬಂದು ಕ್ರೀಡೆಯಲ್ಲಿ ತೊಡಗಿಸಿಕೊಳ್ಳಬೇಕು ಎಂದರು.

ಈ ವೇಳೆ ದೈಹಿಕ ಶಿಕ್ಷಕ ಎಸ್.ಎ. ಬೆಟಗೇರಿ, ಕೆ.ಪಿ. ಪಾಟೀಲ, ಶಿಕ್ಷಕರಾದ ಎಂ.ಆಯ್. ಡಂಬಳ, ಎಸ್.ಕೆ. ನಧಾಪ್, ಆರ್.ಎಚ್. ಮನ್ನಂಗಿ, ವಿ.ಎಚ್. ರಾಠೋಡ, ಎಸ್.ಎ. ಮುಲ್ಲಾ, ಗೂಳಣ್ಣವರ, ಎ.ಎ. ವಠಾರ, ಎಸ್.ಎನ್. ತಳ್ಳಳ್ಳಿ, ಪ್ರವೀಣ ಗಾಯಕರ, ಎಫ್.ಸಿ. ಹಮ್ಮಸಾಗರ, ಸಿ.ಎಸ್. ನಾಪ್ಪಿ ಸೇರಿದಂತೆ ಸಿಬ್ಬಂದಿ, ವಿದ್ಯಾರ್ಥಿಗಳಿದ್ದರು. ಎಸ್.ಆರ್. ಮಾಡಳ್ಳಿ ನಿರೂಪಿಸಿದರು.

# ಕಟ್ಟಡ ನಿರ್ಮಾಣ ಕಾರ್ಮಿಕರ ಉಚಿತ ಆರೋಗ್ಯ ತಪಾಸಣೆ




■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಕಾರ್ಮಿಕ ಮಂಡಳಿಯ ಕಾರ್ಮಿಕ ಇಲಾಖೆಯಿಂದ ಉಚಿತ ಆರೋಗ್ಯ ತಪಾಸಣೆ ಕಾರ್ಯಕ್ರಮದ ಅಂಗವಾಗಿ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಒಕ್ಕೂಟ ಹಾಗೂ ಕಾರ್ಮಿಕ ಕಲ್ಯಾಣ ಸಂಸ್ಥೆ ಇವರ ಸಂಯುಕ್ತಾಶ್ರಯದಲ್ಲಿ ಸಂಘದ ಕಾರ್ಯಾಲಯದಲ್ಲಿ ಕಾರ್ಮಿಕರ ಆರೋಗ್ಯ ತಪಾಸಣೆಯನ್ನು ಮಾಡಲಾಯಿತು.

ಒಕ್ಕೂಟದ ಅಧ್ಯಕ್ಷ ಮೊಹಮ್ಮದ ಇರ್ಫಾನ್ ಡಂಬಳ್, ಚಿ ಆ ಬೇಲೇರಿ, ಗೌರವಾಧ್ಯಕ್ಷ ಭೀಮಪ್ಪ ಪೂಜಾರ್, ಗೌಸ್ ಬಳ್ಳಾರಿ, ಪ್ರಧಾನ ಕಾರ್ಯದರ್ಶಿ ನಾಸಿರ್ ಚಿಕ್ಕೇನಕೊಪ್ಪ, ಉಪಾಧ್ಯಕ್ಷ ಶಂಕರ್‌ಗೌಡ್ರು ಭರಮ್‌ಗೌಡ್ರು, ಲಿಂಗಪ್ಪ ಕಟ್ಟಿಮನಿ, ಹಲೋ ಮಿನಿಯನ್ ಸಂಘದ ಅಧ್ಯಕ್ಷ ಇಬ್ರಾಹಿಂ ಹಳ್ಳಿಕೇರಿ, ಜೈ ಹೋ ಕರ್ನಾಟಕ ಪರಿವರ್ತನಾ ವೇದಿಕೆಯ ಅಧ್ಯಕ್ಷ ರಫೀಕ್ ಧಾರವಾಡ್, ಶಂಕ್ರಣ್ಣ ಗುರುಬಸಣ್ಣವರ್, ಮುಸ್ತಾಕ್ ಮುಲ್ಲಾ, ಖಾದರ್‌ಸಾಬ್ ಬಳ್ಳಾರಿ, ನೂರಅಹ್ಮದ್ ಬಳ್ಳಾರಿ, ಅನ್ವರ್ ರಾಣೇಬೆನ್ನೂರು, ರಮೇಶ್ ಬೆಳೆಯಲಿ, ಮುಧಸ್‌ಸರ್ ಬಳ್ಳಾರಿ ಹಾಗೂ ಕಾರ್ಮಿಕ ಮುಖಂಡರು ಉಪಸ್ಥಿತರಿದ್ದರು.

# ನಿವೃತ್ತಿ ಹೊಂದಿದ ಎ.ಐ. ನಾಯಕರಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

38 ವರ್ಷಗಳ ಕಾಲ ಪ್ರಾಂಶುಪಾಲರಾಗಿ ಅಂಜುಮನ್-ಎ-ಇಸ್ಲಾಂ ಪಾಲಿಟೆಕ್ನಿಕ್, ಗದಗ ವಿದ್ಯಾಸಂಸ್ಥೆಯನ್ನು ಮುನ್ನಡೆಸಿದ ಕೀರ್ತಿ ಮತ್ತು ಗೌರವಕ್ಕೆ ಪಾತ್ರರಾಗಿ ಜ.31ರಂದು ವಯೋನಿವೃತ್ತಿ ಹೊಂದಿದ ಎ.ಐ. ನಾಯಕರನ್ನು ಆತ್ಮೀಯವಾಗಿ ಸನ್ಮಾನಿಸಿ ಬೀಳ್ಕೊಡಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಸ್ಥೆಯ ಚೇರಮನ್ ಝಾಕೀರ ಹುಸೇನ ಮುಜಾವರ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ವಿ.ಪ ಸದಸ್ಯ ಎಸ್.ವಿ. ಸಂಕನೂರ, ಚಿಕ್ಕಟ್ಟಿ ಶಿಕ್ಷಣ ಸಮೂಹ ಸಂಸ್ಥೆಗಳ ಅಧ್ಯಕ್ಷ ಎಸ್.ವಾಯ್. ಚಿಕಟ್ಟಿ ಹಾಗೂ ಆಡಳಿತ ಮಂಡಳಿಯ ಸದಸ್ಯರು ಪಾಲ್ಗೊಂಡಿದ್ದರು.

ಇದೇ ಸಂದರ್ಭದಲ್ಲಿ ಆಡಳಿತ ಮಂಡಳಿಯ ಅಧ್ಯಕ್ಷ ಝಾಕೀರ ಹುಸೇನ ಮುಜಾವರ, ನೂತನ ಪ್ರಾಂಶುಪಾಲರಾಗಿ ಕಾರ್ಯಭಾರ ವಹಿಸಿಕೊಳ್ಳಲು ಇ & ಸಿ ವಿಭಾಗದ ಮುಖ್ಯಸ್ಥರಾದ ಕಿಶೋರ ಎನ್. ರೇವಣಕರರವರಿಗೆ ಆದೇಶ ನೀಡಿದರು.

ಕಾರ್ಯಕ್ರಮದಲ್ಲಿ ಆಡಳಿತ ಮಂಡಳಿಯ ಎಲ್ಲ ನಿರ್ದೇಶಕರು, ಪಾಲಿಟೆಕ್ನಿಕ್ ಕಾಲೇಜಿನ ಸಿಬ್ಬಂದಿ ವರ್ಗ, ಅಂಜುಮನ್ ಶಿಕ್ಷಣ ಸಂಸ್ಥೆಯ ಕರ್ನಾಟಕ ಪದವಿಪೂರ್ವ ಕಾಲೇಜಿನ ಹಾಗೂ ಐ.ಟಿ.ಐ ಕಾಲೇಜಿನ ಪ್ರಾಂಶುಪಾಲರು ಮತ್ತು ಎಲ್ಲ ಸಿಬ್ಬಂದಿಗಳು ಭಾಗವಹಿಸಿದ್ದರು. ಉಪನ್ಯಾಸಕರಾದ ಎಸ್.ಬಿ. ಅಫಘಾನ ಸ್ವಾಗತಿಸಿದರು. ಕುಮಾರಸ್ವಾಮಿ.ಟಿ.ಎಚ್., ಜಗದೀಶ ನರಗುಂದ ನಿರೂಪಿಸಿ, ವಂದಿಸಿದರು.

## ಸಿದ್ಧಲಿಂಗ ನಗರದ ಸರಕಾರಿ ಪ್ರೌಢಶಾಲೆ ಆವರಣದಲ್ಲಿ ಬಣ್ಣದರ್ಪಣ ಸೇವೆಗೆ ಚಾಲನೆ

# ದಾನಿಗಳಿಂದ ಸರ್ಕಾರಿ ಶಾಲೆಗೆ ಜೀವಕಳೆ




ದಾನಿಗಳಾದ ಮನಿಷ ಬಸವರಡ್ಡಿ ಹುಚ್ಚಣ್ಣವರ ಮಾತನಾಡಿ, ನಮ್ಮ ಹಿರಿಯರು ನಮಗೆ ಹಾಕಿಕೊಟ್ಟ ಆದರ್ಶಗಳನ್ನು ಇಟ್ಟುಕೊಂಡು ನಮ್ಮ ಉದ್ಯಮದ ಜೊತೆಗೆ ಸಮಾಜ ಸೇವೆ ಮಾಡುವ ಕೆಲಸದಿಂದ ನಮಗೆ ಸಾಕಷ್ಟು ತೃಪ್ತಿ ಹಾಗೂ ನೆಮ್ಮದಿಯಿದೆ. ಈ ನಮ್ಮ ಅಳಿಲು ಸೇವೆ ಸಾವಿರಾರು ಮಕ್ಕಳಿಗೆ ಉಪಯುಕ್ತವಾಗುತ್ತಿರುವುದು ಖುಷಿ ತಂದಿದೆ ಎಂದರು.

■ವಿಜಯಸಾಕ್ಷಿ ಸುದ್ದಿ, ಗದಗ

ಸಭಾಪತಿ ಬಸವರಾಜ ಹೊರಟ್ಟಿ ದಂಪತಿಗಳು ದತ್ತು ಪಡೆದ ಸ್ಥಳೀಯ ಸಿದ್ಧಲಿಂಗ ನಗರದ ಸರಕಾರಿ ಪ್ರೌಢಶಾಲೆಯ ಕಳೆ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ. ಈಗ ಬಿಂಕದಕಟ್ಟಿ ಗ್ರಾಮದ ಪ್ರಗತಿಪರ ಕೃಷಿಕರು, ಉದ್ದಿಮೆದಾರರೂ ಆದ ಬಸವರಡ್ಡಿ ಹುಚ್ಚಣ್ಣವರ ಪರಿವಾರದವರಿಂದ ಬಣ್ಣದರ್ಪಣ ಸೇವೆ ಸಲ್ಲಿಸುವ ಮೂಲಕ ಶಾಲೆಗೆ ಜೀವಕಳೆ ತುಂಬುತ್ತಿರುವ ಕಾರ್ಯ ಶ್ಲಾಘನೀಯ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎಸ್. ಬುರಡಿ ಅಭಿಪ್ರಾಯಪಟ್ಟರು.

ಅವರು ಸಿದ್ಧಲಿಂಗ ನಗರದ ಸರಕಾರಿ ಪ್ರೌಢಶಾಲೆ ಆವರಣದಲ್ಲಿ ಬಣ್ಣದರ್ಪಣ ಸೇವೆಗೆ ಚಾಲನೆ ನೀಡಿ ಮಾತನಾಡಿ, ಕೇವಲ ಸರ್ಕಾರದಿಂದ ಶಾಲೆಯ ಅಭಿವೃದ್ಧಿ ಕಷ್ಟಸಾಧ್ಯ. ಸಮಾಜದ ದಾನಿಗಳಿಂದ ನೆರವು ಸಿಕ್ಕಾಗ ಶಾಲೆಯನ್ನು ಅಭಿವೃದ್ಧಿಪಡಿಸಬಹುದು. ಈಗಾಗಲೇ ಈ ಶಾಲೆಗೆ ಸಭಾಪತಿ ಬಸವರಾಜ ಹೊರಟ್ಟಿಯವರು, ವಿಜಯ ಹಬೀಬ ಕುಟುಂಬದವರು, ಸಂಜಯ ಮಿಸ್ಕಿನ್ ಕುಟುಂಬದವರು, ಸುನೀಲ ವೆರ್ಣೇಕರ್ ಕುಟುಂಬದವರು ಸಹಾಯಹಸ್ತ ಚಾಚಿದ್ದರಿಂದ ಈ ಶಾಲೆ ಕೇವಲ ಒಂದು ವರ್ಷದಲ್ಲಿ ಜಿಲ್ಲೆಯಲ್ಲಿ ಪ್ರತಿಷ್ಠಿತ ಶಾಲೆಯಾಗಿ ಹೊರಹೊಮ್ಮಿದ್ದು ಶಿಕ್ಷಣ ಇಲಾಖೆಗೆ ಹೆಮ್ಮೆಯ ಸಂಗತಿ.

ಈಗ ಬಸವರಡ್ಡಿ ಹುಚ್ಚಣ್ಣವರ ಪರಿವಾರದವರ ಸಹಕಾರದಿಂದ ಆಕರ್ಷಕ ಬಣ್ಣ ಹಚ್ಚಿಸುವ ಮೂಲಕ ಶಾಲೆಗೆ ಸುಂದರ ವಾತಾವರಣವನ್ನು ಕಲ್ಪಿಸುತ್ತಿರುವುದು ಶ್ಲಾಘನೀಯ. ಬಸವರಡ್ಡಿ ಹುಚ್ಚಣ್ಣವರ ಪರಿವಾರದವರಿಗೆ ಇನ್ನಷ್ಟು ಸಮಾಜಸೇವೆ ಮಾಡುವ ಶಕ್ತಿಯನ್ನು ಆ ಭಗವಂತ ದಯಪಾಲಿಸಲಿ ಎಂದು ಪ್ರಾರ್ಥಿಸಿ, ಆ ಕುಟುಂಬಕ್ಕೆ ಶಿಕ್ಷಣ ಇಲಾಖೆಯ ಪರವಾಗಿ ಧನ್ಯವಾದ ತಿಳಿಸಿದರು.

ಡಾ.ಬಸವರಾಜ ಧಾರವಾಡ ಮಾತನಾಡಿ, ದಾನ-ಧರ್ಮ ಮಾಡುವ ಮೂಲಕ ಸಮಾಜದಲ್ಲಿ ನಮ್ಮದೇ ಆದ ಅಳಿಲು ಸೇವೆಯನ್ನು ಸಲ್ಲಿಸಬೇಕು. ಆ ಮೂಲಕ ನೆಮ್ಮದಿ, ಶಾಂತಿಯನ್ನು ಕಾಣಲು ಸಾಧ್ಯ. ಅಂತಹ ಕೆಲಸದಲ್ಲಿ ಬಸವರಡ್ಡಿ ಹುಚ್ಚಣ್ಣವರ ಕುಟುಂಬ ತೊಡಗಿದ್ದು ಸ್ಮರಣೀಯ ಕೆಲಸವಾಗಿದೆ ಎಂದರು.

ಈ ಸಂದರ್ಭದಲ್ಲಿ ಪ್ರಭಾರಿ ಮುಖ್ಯೋಪಾಧ್ಯಾಯರಾದ ಜಯಲಕ್ಷ್ಮೀ ಅಣ್ಣಿಗೇರಿ, ಶಶಿಕಲಾ ಗುಳೆದವರ, ಸರ್ವಮಂಗಳ ಪತ್ತಾರ್, ಮಂಜುಳಾ ಸಾಂಬ್ರಾಣಿ, ಎಸ್.ಬಿ. ಗದ್ದನಗೇರಿ, ಜಿ.ಎನ್. ಅಳವಂಡಿ, ಶಂಕ್ರಮ್ಮ ಹನಮಗೌಡರ, ಶಾರದಾ ಬಾಣದ, ಶೋಭಾ ಗಾಳಿ, ಎಸ್. ಯು. ಕುಷ್ಟಗಿ, ಸಂಜೀವಿನಿ ಕೂಲಗುಡಿ, ವಿ.ಬಿ. ಶಿವನಗೌಡರ, ನಾಗಪ್ಪ ಶಿರೋಳ, ರಮೇಶ ಬಸರಿ, ಪದ್ಮಾವತಿ ದಾಸರ, ಎಲ್.ಬಿ. ಮಾಳೊತ್ತರ ಸೇರಿದಂತೆ ಶಾಲೆಯ ಎಲ್ಲ ಶಿಕ್ಷಕ ವೃಂದದವರು ಉಪಸ್ಥಿತರಿದ್ದರು.

# ಸಮಗ್ರ ವಿಕಾಸಕ್ಕೆ ವ್ಯಾಖ್ಯಾನ ಬರೆದ ಬಜೆಟ್



■ವಿಜಯಸಾಕ್ಷಿ ಸುದ್ದಿ, ಗದಗ

ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಮಂಡಿಸಿರುವ ಮಧ್ಯಂತರ ಬಜೆಟ್ ದೇಶದ ಸಮಗ್ರ ವಿಕಾಸಕ್ಕೆ ವ್ಯಾಖ್ಯಾನ ಬರೆದಿದ್ದು, ಸರ್ವ ಕ್ಷೇತ್ರಗಳ, ಸರ್ವ ಸಮುದಾಯಗಳ ಏಳಿಗೆಯ ದೃಷ್ಟಿಕೋನದ ಬಜೆಟ್ ಆಗಿದೆ ಎಂದು ಬಿಜೆಪಿ ಮುಖಂಡ ವಿಜಯಕುಮಾರ ಗಡ್ಡಿ ಅಭಿಪ್ರಾಯಪಟ್ಟಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಕೆಲವೇ ದಿನಗಳಲ್ಲಿ ಲೋಕಸಭೆ ಚುನಾವಣೆ ನಡೆಯಲಿದ್ದರೂ ಸಹ ಅಧಿಕಾರಕ್ಕಾಗಿ ದೇಶದ ಜನರನ್ನು ಮರಳು ಮಾಡುವ ರೀತಿಯಲ್ಲಿ ಉಚಿತ ಕೊಡುಗೆಗಳನ್ನು ನೀಡದೇ ಭವ್ಯ ಭಾರತ ಕಟ್ಟುವಂಥ ಬಜೆಟ್ ಮಂಡಿಸಿರುವುದು ಪ್ರಧಾನಿ ಮೋದಿ ಹಾಗೂ ಕೇಂದ್ರ ಸರ್ಕಾರದ ದಿಟ್ಟತನದ ದೇಶಪ್ರೇಮವಾಗಿದೆ.

ಯುವಕರಿಗೆ ಹೊಸ ಉದ್ಯಮ ಸ್ಥಾಪಿಸಲು ಮುದ್ರಾ ಯೋಜನೆ, 'ಕಿಸಾನ್ ಸಂಪದ್' ಯೋಜನೆ, ಬಡವರಿಗೆ 2 ಕೋಟಿ ಮನೆಗಳನ್ನು ನಿರ್ಮಿಸುವ ಭರವಸೆ, ರಕ್ಷಣೆಗಾಗಿ 5 ಲಕ್ಷ ಕೋಟಿ ರೂ., ಸ್ವಸಹಾಯ ಸಂಘಗಳ ಮಹಿಳೆಯರಿಗಾಗಿ 'ಲಕ್‌ಪತಿ ದೀದಿ' ಯೋಜನೆಗಳೊಂದಿಗೆ ನಮೋ ಭಾರತ್ ರೈಲುಗಳನ್ನು ದೇಶಾದ್ಯಂತ ವಿಸ್ತರಿಸುವ ಯೋಜನೆ ಹಾಕಿಕೊಳ್ಳಲಾಗಿದೆ. ಲಕ್ಷದ್ವೀಪ ಸೇರಿದಂತೆ ದೇಶದ ದ್ವೀಪಗಳನ್ನು ಪ್ರವಾಸಿಗರ ಅಪೇಕ್ಷೆಗೆ ತಕ್ಕಂತೆ ಅಭಿವೃದ್ಧಿಗೊಳಿಸಲು ಕ್ರಮ ಕೈಕೊಳ್ಳಲಾಗಿದ್ದು, ತಂತ್ರಜ್ಞಾನ, ಸಹಕಾರಕ್ಕೆ ಬಜೆಟ್‌ನಲ್ಲಿ ರಾಶಿ ರಾಶಿ ಕೊಡುಗೆಗಳನ್ನು ನೀಡಲಾಗಿದೆ. ಒಟ್ಟಾರೆ ಇದು ಉಚಿತ ಕೊಡುಗೆಗಳ ಬಜೆಟ್ ಆಗದೇ ದೇಶದ ಅಭಿವೃದ್ಧಿಯ ಬಜೆಟ್ ಆಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.


# ನಾಳೆ ವಿದ್ಯುತ್ ವ್ಯತ್ಯಯ

■ವಿಜಯಸಾಕ್ಷಿ ಸುದ್ದಿ, ಗದಗ

33/11 ಕೆವ್ಹಿ ಸೂರಣಗಿ ಉಪ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತುರ್ತು ನಿರ್ವಹಣಾ ಕೆಲಸ ಕೈಗೊಳ್ಳುವುದರಿಂದ ಫೆ.4ರಂದು ಮುಂಜಾನೆ 8 ಗಂಟೆಯಿಂದ ಸಾಯಂಕಾಲ 6 ಘಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ.

33/11 ಕೆವ್ಹಿ ಸೂರಣಗಿ ಉಪಕೇಂದ್ರದಿಂದ ಪೂರೈಕೆಯಾಗುತ್ತಿರುವ ಎಲ್ಲಾ ನಗರ ಮತ್ತು ಗ್ರಾಮೀಣ ಪ್ರದೇಶಗಳ 33/11 ಕೆವ್ಹಿ ವಿತರಣಾ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಕಾರಣ, ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕೆಂದು ಹೆಸ್ಕಾಂ ಪ್ರಕಟಣೆ ತಿಳಿಸಿದೆ.

# ಮುತ್ತಣ್ಣ ತಿರ್ಲಾಪುರರಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

'ಗದುಗಿನ ಗಾಂಧಿ' ಎಂದೇ ಪ್ರಸಿದ್ಧವಾಗಿರುವ ರೋಣದ ಕರಕಿಕಟ್ಟಿ ಗ್ರಾಮದ ಮುತ್ತಣ್ಣ ತಿರ್ಲಾಪುರ ಸ್ವಗ್ರಾಮದಿಂದ ಅಯೋಧ್ಯೆಯವರೆಗೂ ಸುಮಾರು 2 ಸಾವಿರ ಕಿ.ಮೀ ಪಾದಯಾತ್ರೆಯ ಮೂಲಕ ತೆರಳಿ ಪ್ರಭು ಶ್ರೀರಾಮನ ದರ್ಶನ ಪಡೆದು ಗದುಗಿಗೆ ಹಿಂದಿರುಗಿದ ಸಂದರ್ಭದಲ್ಲಿ ಕ್ರಾಂತಿ ಸೇನಾ ಸಂಘಟನೆ ವತಿಯಿಂದ ಪಾದಪೂಜೆ ಹಾಗೂ ಸನ್ಮಾನ ನೆರವೇರಿಸಿದರು.

ಸಂಘಟನೆಯ ಗದಗ ಜಿಲ್ಲಾಧ್ಯಕ್ಷ ಬಾಬು ಬಾಕಳೆ ಮಾತನಾಡಿ, ಮುತ್ತಣ್ಣ ತಿರ್ಲಾಪುರರು ಈ ವಯಸ್ಸಿನಲ್ಲಿಯೂ ಒಬ್ಬರೇ ಪಾದಯಾತ್ರೆ ಮುಖಾಂತರ ಉತ್ತರ ಪ್ರದೇಶದ ಅಯೋಧ್ಯೆಯ ರಾಮಮಂದಿರ ತಲುಪಿರುವುದು ಗದಗ ಜಿಲ್ಲೆಗೆ ಹೆಮ್ಮೆ ತರುವ ವಿಷಯವಾಗಿದೆ ಎಂದರು.

ಈ ಸಂದರ್ಭದಲ್ಲಿ ಗೌರವ ಕಾರ್ಯದರ್ಶಿ ಪ್ರವೀಣ ಹಬೀಬ, ಭೀಮಾ ಕಾಟಿಗರ್, ರಾಮು ಕಬಾಡಿ, ಯಲ್ಲಪ್ಪ ಸಿದ್ಲಿಂಗ್, ಸತೀಶ್ ಪೂಜಾರಿ, ಶಿವಾನಂದ್ ನಾಗನೂರು, ಬಿ.ಪಿ. ನವಲೇಕರ್ ಮುಂತಾದವರು ಉಪಸ್ಥಿತರಿದ್ದರು.



■ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರ

ಬಾಳೆಹೊನ್ನೂರಿನ ಶ್ರೀ ರಂಭಾಪುರಿ ಪೀಠದ ಡಾ.ವೀರಸೋಮೇಶ್ವರ ಜಗದ್ಗುರುಗಳು ಶುಕ್ರವಾರ ಮುಕ್ತಿಮಂದಿರ ಧರ್ಮಕ್ಷೇತ್ರದ ಲಿಂ.ವೀರಗಂಗಾಧರ ಜಗದ್ಗುರುಗಳ ಗದ್ದುಗೆ ಪೂಜೆ ಸಲ್ಲಿಸಿದರು. ಈ ವೇಳೆ ಧರ್ಮಕ್ಷೇತ್ರದ ಕಳೆದ ನಾಲ್ಕೈದು ದಶಕಗಳಿಂದ ಪೂಜಾ ಕಾರ್ಯ ಸಲ್ಲಿಸುತ್ತಿರುವ ಹಿರಿಯ ಸೇವಾಕರ್ತ ವೀರಭದ್ರಯ್ಯ ಚಿಕ್ಕಮಠ ಅವರಿಗೆ ಗೌರವ ಶ್ರೀರಕ್ಷೆ ನೀಡಿದರು. ಪಟ್ಟಾಧ್ಯಕ್ಷರಾದ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು ಇದ್ದರು.

# ಆನ್‌ಲೈನ್‌ನಲ್ಲಿ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಖಾಲಿ ಇರುವ ರೋಣ ತಾಲೂಕಿನ ಹೊಳೆಮಣ್ಣೂರ, ಮುಂಡರಗಿ ತಾಲೂಕಿನ ಶಿವಾಜಿನಗರ ಗ್ರಾಮ ಪಂಚಾಯತಿಗಳ ಗ್ರಾಮಒನ್ ಕೇಂದ್ರಗಳಿಗೆ ಆನ್‌ಲೈನ್ ನಲ್ಲಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಆಸಕ್ತ ಅಭ್ಯರ್ಥಿಗಳು ಫೆಬ್ರವರಿ 15 ರೊಳಗಾಗಿ ಅರ್ಜಿಗಳನ್ನು https://www.karnatakaone.gov.in/Public/GramOneFranchisee Terms ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಿಧನ ವಾರ್ತೆ



**ಮಾನವ್ವ ಬಾಪುರಿ**

ಗದಗ: ತಾಲೂಕಿನ ನರಸಾಪೂರ ಗ್ರಾಮದ ಮಾರುತಿ ನಗರದ ನಿವಾಸಿ ಮಾನವ್ವ ಸಿದ್ದಪ್ಪ ಬಾಪುರಿ (87) ಗುರುವಾರ ನಿಧನರಾದರು.

ಮೃತರು ಪತಿ, ಮೂವರು ಪುತ್ರರು, ಇಬ್ಬರು ಪುತ್ರಿಯರು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

# ಕ್ರೀಡೆಯಿಂದ ನಾಯಕತ್ವ ಗುಣ ವೃದ್ಧಿ

■ವಿಜಯಸಾಕ್ಷಿ ಸುದ್ದಿ, ನರಗುಂದ

ಕ್ರೀಡೆಯು ಮಾನಸಿಕ ಮತ್ತು ದೈಹಿಕ ಸದೃಢತೆಗೆ ಉತ್ತಮ ಅಭ್ಯಾಸವಾಗಿದೆ. ಶಿರೋಳ ಗ್ರಾಮದಲ್ಲಿಯೂ ಅತ್ಯುತ್ತಮ ಕ್ರೀಡಾಪಟುಗಳಿದ್ದು, ಒಂದಿಲ್ಲೊಂದು ಕ್ರೀಡೆಯಲ್ಲಿ ಸದಾ ಕ್ರಿಯಾಶೀಲವಾಗಿ ಮುಂದುವರೆಯುತ್ತಿರುವುದು ಶ್ಲಾಘನೀಯ ಬೆಳವಣಿಗೆಯಾಗಿದೆ ಎಂದು ಲಾಲಸಾಬ ಅರಗಂಜಿ ನುಡಿದರು.

ತಾಲೂಕಿನ ಶಿರೋಳ ಗ್ರಾಮದ ಜಗದ್ಗುರು ಶ್ರೀ ತೋಂಟದಾರ್ಯ ಮಠದ ಜಾತ್ರಾ ಮಹೋತ್ಸವದ ಅಂಗವಾಗಿ ಲಿಂ. ಮ.ನಿ.ಪ್ರ ಗುರುಬಸವ ಮಹಾಸ್ವಾಮಿಗಳ ಸ್ಮರಣಾರ್ಥವಾಗಿ ಶಿರೋಳ ವಾರಿಯರ್ಸ್ ಗೆಳೆಯರ ಬಳಗ ಹಮ್ಮಿಕೊಂಡ 7ಎ ಸೈಡ್ ಮಿನಿಗ್ರೌಂಡ್ ಕ್ರಿಕೆಟ್ ಟೂರ್ನಮೆಂಟ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಮೈದಾನ ಉದ್ಘಾಟನೆ ನೆರವೇರಿಸಿ ಮಾತನಾಡಿದ ಸಂಕಲ್ಪ ಶೆಟ್ಟರ್, ಗ್ರಾಮದಲ್ಲಿ ಯುವಕರು ಇಂತಹ ಕಾರ್ಯಕ್ರಮ ಆಯೋಜಿಸಿ ನನ್ನನ್ನು ಆಹ್ವಾನಿಸಿದ್ದು ಸಂತೋಷ ತಂದಿದೆ. ಯುವಕರು ಚಿಕ್ಕವರಾದರೂ ಅವರ ಕಾರ್ಯ ದೊಡ್ಡದು. ಇಂತಹ ಕಾರ್ಯಕ್ರಮಗಳಿಗೆ ನಮ್ಮ ಸಹಕಾರ ಸದಾ ಇರುತ್ತದೆ ಎಂದರು.

ದಿವ್ಯ ಸಾನ್ನಿಧ್ಯ ವಹಿಸಿದ್ದ ಶಾಂತಲಿಂಗ ಮಹಾಸ್ವಾಮಿಗಳು ಆಶೀರ್ವಚನವಿತ್ತರು. ಈ ಸಂದರ್ಭದಲ್ಲಿ ಅಭಿನವ ಯಚ್ಚರಸ್ವಾಮಿಗಳು, ದ್ಯಾಮಣ್ಣ ಕಾಡಪ್ಪನವರ, ಪ್ರಕಾಶಗೌಡ ತಿರಕನಗೌಡ್ರ, ಬಸಯ್ಯ ಮಠದ, ವೀರಯ್ಯ ನಾಗಲೋಟಿಮಠ, ಶಿವಾನಂದ ಬಡಿಗೇರ ಸೇರಿದಂತೆ ಶಿರೋಳ ಲೆಜೆಂಡ್ಸ್ ಟೀಂ ಹಾಗೂ ಗ್ರಾಮದ ಯುವಕರು ಉಪಸ್ಥಿತರಿದ್ದರು.

ಸತತ ಮೂರು ದಿನಗಳ ಕಾಲ ನಡೆದ ಕ್ರಿಕೆಟ್ ಸ್ಪರ್ಧೆಯಲ್ಲಿ ಮೊದಲನೇ ಬಹುಮಾನವನ್ನು ಎಸ್.ಕೆ.ಪಿ.ಯು ಹೊಳೆ ಆಲೂರು-ಅಮರಗೋಳ, ಎರಡನೇ ಬಹುಮಾನವನ್ನು ವೀರಕೇಸರಿ ವಾಸನ, ಮೂರನೇ ಬಹುಮಾನವನ್ನು ಶ್ರೀ ಮಾರುತೇಶ್ವರ ಬೂದಿಹಾಳ ಪಡೆಯಿತು. ಉತ್ತಮ ಬೌಲರ್ ಗಿರೀಶಗೌಡ ನವಲಗುಂದ, ಉತ್ತಮ ಬ್ಯಾಟ್ಸಮನ್ ರಾಜು ಎಸ್.ಕೆ.ಪಿ.ಯು ಟೀಮ್, ಉತ್ತಮ ತಂಡ-ಶಿರೋಳ ಲೆಜೆಂಡ್ಸ್ ತಂಡಗಳು ಬಹುಮಾನ ಪಡೆದುಕೊಂಡವು.

# ಗದಗ ತಂಡಕ್ಕೆ 3ನೇ ಗೆಲುವು

■ವಿಜಯಸಾಕ್ಷಿ ಸುದ್ದಿ, ಗದಗ


ಹುಬ್ಬಳ್ಳಿಯಲ್ಲಿ ನಡೆಯುತ್ತಿರುವ ಸೆಕೆಂಡ್ ಡಿವ್ಹಿಜನಲ್ ಕ್ರಿಕೆಟ್ ಲೀಗ್ ಪಂದ್ಯದಲ್ಲಿ ಗದಗ ತನ್ನ 3ನೇ ಗೆಲುವು ಸಾಧಿಸಿದೆ. ಟಾಸ್ ಗೆದ್ದು ಮೊದಲು ಬ್ಯಾಟ್ ಮಾಡಿದ ಗದಗ ತಂಡ 48.1 ಓವರ್‌ನಲ್ಲಿ 259 ರನ್ ಗಳಿಸಿತು. ಭರ್ಜರಿ ಬ್ಯಾಟಿಂಗ್ ಮೂಲಕ ಶತಕ ಸಿಡಿಸಿ 140 ರನ್ ಕಲೆಹಾಕಿದ ಅಸ್ಲಂ



ಮುಧೋಳ ತಂಡಕ್ಕೆ ಪ್ರಮುಖ ಪಾತ್ರ ವಹಿಸಿದರು. ಉತ್ತರವಾಗಿ ಬ್ಯಾಟಿಂಗ್ ಮಾಡಿದ ತಾನಾಜಿ ಸ್ಪೋರ್ಟ್ಸ್ ಕ್ಲಬ್ 35.2 ಓವರ್‌ನಲ್ಲಿ 175 ರನ್‌ಗೆ ಆಲೌಟ್ ಆಯಿತು.

ಗದಗ ಪರ ಸತೀಶ ವಾಳೋದೆ 4, ಸಚಿನ ದೇವೇಶ, ಅಸ್ಲಂ, ಕಿಶೋರ, ಶುಭಂ ತಲಾ ಒಂದು ವಿಕೆಟ್ ಪಡೆದರು. ಇದರೊಂದಿಗೆ ಸ್ಪೋರ್ಟ್ಸ್ ಅಕಾಡೆಮಿ ಆಫ್ ಗದಗ ತಂಡ 84 ರನ್‌ಗಳ ಜಯ ಸಾಧಿಸಿತು.

# ಕಾವ್ಯ ಸಂಸ್ಕೃತಿಯ ನಿರ್ಮಾತೃ ದ.ರಾ. ಬೇಂದ್ರೆ



■ವಿಜಯಸಾಕ್ಷಿ ಸುದ್ದಿ, ಗದಗ

ದ.ರಾ. ಬೇಂದ್ರೆಯವರ ಕಾವ್ಯೋತ್ಪತ್ತಿಯ ನೆಲೆ ಸೆಲೆ ಸಂಸ್ಕೃತಿಯ ಭಾಗವಾಗಿದೆ. ಹೀಗಾಗಿ ಕನ್ನಡ ಸಾಹಿತ್ಯದ ಸಂದರ್ಭದಲ್ಲಿ ಕಾವ್ಯ ಸಂಸ್ಕೃತಿಯನ್ನೇ ನಿರ್ಮಾಣ ಮಾಡಿದ ಕೀರ್ತಿ ಇವರದಾಗಿದೆ. ಎಲ್ಲ ಕಾಲಕ್ಕೂ ಬಾಳುವಂತಹ ಕವಿತೆಗಳನ್ನು ನೀಡಿದ್ದಾರೆ. ನವೋದಯ ಕಾಲಘಟ್ಟದ ಪ್ರಮುಖ ಕವಿಯಾಗಿದ್ದ ಬೇಂದ್ರೆ ಪದಗಾರುಡಿಗರಾಗಿ ಗಮನ ಸೆಳೆದಿದ್ದಾರೆ ಎಂದು ಸಂಸ್ಕೃತಿ ಚಿಂತಕ ಡಾ. ಜಿ.ಬಿ. ಪಾಟೀಲ ನುಡಿದರು.

ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನಿಂದ ತೋಂಟದ ಸಿದ್ಧಲಿಂಗಶ್ರೀಗಳ ಕನ್ನಡ ಭವನದಲ್ಲಿ ಏರ್ಪಡಿಸಿದ್ದ ಬೇಂದ್ರೆ ದಿನಾಚರಣೆಯ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು. ಬೇಂದ್ರೆಯವರ ಕಾವ್ಯ ವಾಚನಾ ಶೈಲಿ ಅದ್ಭುತವಾಗಿತ್ತು ಎಂದರಲ್ಲದೆ, ಅವರ ಮಾತುಗಳನ್ನು ಕೇಳುವ ಅವಕಾಶ ದೊರೆತ ಸಂದರ್ಭವನ್ನು ನೆನಪಿಸಿಕೊಂಡರು.

ಬೇಂದ್ರೆ ಸಾಹಿತ್ಯದ ವಿಚಾರವಾಗಿ ಎಸ್.ಯು. ಸಜ್ಜನಶೆಟ್ಟರ ಮಾತನಾಡಿ, ಮಾನವೀಯ ಅಂತಃಕರಣದ ಕವಿ ಇವರಾಗಿದ್ದರು. ಬ್ರಿಟಿಷ್ ಪಾರುಪತ್ಯದ ವಿರುದ್ಧ ಬರೆದ 'ಗರಿ' ಕವನ ಸಂಕಲನದ ನರಬಲಿ ಪದ್ಯ ಬ್ರಿಟಿಷ್ ಅಧಿಕಾರಿಗಳ ಕೆಂಗಣ್ಣಿಗೆ ಗುರಿಯಾಗಿ, ಸೆರೆಮನೆ ವಾಸ ಅನುಭವಿಸಿದರು. ದೇಶಾಭಿಮಾನ, ನಾಡಾಭಿಮಾನ ಬೇಂದ್ರೆಯವರಲ್ಲಿ ಹೆಪ್ಪುಗಟ್ಟಿತ್ತು. ರಸವೇ ಜನನ, ವಿರಸ ಮರಣ, ಸಮರಸವೇ ಜೀವನವೆಂದು ಸಾರಿದ ಮಹೋನ್ನತ ಕವಿ ಎಂದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ವರಕವಿ ಎಂದೇ ಖ್ಯಾತರಾಗಿದ್ದ ಬೇಂದ್ರೆಯವರು ಸಾಹಿತ್ಯ ವಿವಿಧ ವಲಯಗಳನ್ನು ತಮ್ಮ ಕೃತಿಗಳ ಮೂಲಕ ಶ್ರೀಮಂತಗೊಳಿಸಿದ್ದಾರೆ. ಇವರು ಗದಗ ಪರಿಸರದಲ್ಲಿ ನಡೆದಾಡಿದ್ದಾರೆನ್ನುವದು ಹೆಮ್ಮೆಯ ಸಂಗತಿ. ಜೀವನದಲ್ಲಿ ಅನುಭವಿಸಿದ ನೋವುಗಳನ್ನೇ ಸಾಹಿತ್ಯ ರಚನೆಗೆ ಏಣಿಯನ್ನಾಗಿ ಮಾಡಿಕೊಂಡು ಸಾಹಿತ್ಯದ ಅತ್ಯುನ್ನತ ಶಿಖರವನ್ನು ಏರಿದ್ದಾರೆ ಎಂದು ತಿಳಿಸಿದರು.

ಕಿಶೋರಬಾಬು ನಾಗರಕಟ್ಟಿ ಸ್ವಾಗತಿಸಿದರು. ಶಶಿಕಾಂತ ಕೊರ್ಲಹಳ್ಳಿ ನಿರೂಪಿಸಿದರು. ಶ್ರೀಕಾಂತ ಬಡ್ಡೂರ ವಂದಿಸಿದರು.



■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಗಜೇಂದ್ರಗಡ ಸಮೀಪದ ಮುಶಿಗೇರಿ ಗ್ರಾಮ ಪಂಚಾಯತಿಯಲ್ಲಿ ಶುಕ್ರವಾರ ನರೇಗಾ ದಿನಾಚರಣೆ ನಿಮಿತ್ತ ಸಸಿ ನೆಡಲಾಯಿತು. ಗ್ರಾಮ ಪಂಚಾಯತಿ ಸದಸ್ಯ ಲಿಂಗರಾಜ ಬಡಿಗೇರ, ಕಾರ್ಯದರ್ಶಿ ಎಸ್.ಕೆ.ಚಂದಾಲವರ, ಶಂಕರಗೌಡ ಪಾಟೀಲ, ಪ್ರೇಮಾ ಹಿರೇಮಠ ಉಪಸ್ಥಿತರಿದ್ದರು.

# ಸಂಸ್ಥೆಯ ಅಭಿವೃದ್ಧಿಗೆ ಎಲ್ಲರ ಸಹಕಾರ ಮುಖ್ಯ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಅಭಿವೃದ್ಧಿಗೆ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ. ಸಂಸ್ಥೆಯಲ್ಲಿನ ಸಮಸ್ಯೆಗಳನ್ನು ಬಗೆಹರಿಸಲು ಮುಂದಾಗುವೆ. ನನಗೆ ವಹಿಸಿದ ಜವಾಬ್ದಾರಿಯನ್ನು ಪಾರದರ್ಶಕವಾಗಿ ನಿಭಾಯಿಸುತ್ತೇನೆ. ಸಂಸ್ಥೆಯ ಅಭಿವೃದ್ಧಿಗೆ ಸರ್ಕಾರದಿಂದ ಹೆಚ್ಚಿನ ಅನುದಾನ ತಂದು ಸಂಸ್ಥೆಯನ್ನು ಲಾಭದ ಹಾದಿಗೆ ತರಲು ಪ್ರಯತ್ನಿಸುವೆ ಎಂದು ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಅಧ್ಯಕ್ಷ ಭರಮಗೌಡ(ರಾಜು) ಅಲಗೌಡ ಕಾಗೆ ಹೇಳಿದರು.

ಸಂಸ್ಥೆಯ ಕೇಂದ್ರ ಕಚೇರಿಯಲ್ಲಿ ಅಧಿಕಾರ ಸ್ವೀಕರಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹೊಸ ಬಸ್ ಖರೀದಿ, ಸಿಬ್ಬಂದಿಗಳ ವೇತನ ಪರಿಷ್ಕರಣೆ, ಭ್ರಷ್ಟಾಚಾರ ತಡೆ ಸೇರಿದಂತೆ ಸಂಸ್ಥೆಯ ಸಮಸ್ಯೆಗಳ ಪರಿಹಾರಕ್ಕೆ ಕ್ರಮ ಕೈಗೊಳ್ಳಲಾಗುವುದು. ಸರ್ಕಾರದ ಮೇಲೆ ಒತ್ತಡ ಹಾಕಿ ಹೆಚ್ಚಿನ ಅನುದಾನ ತರಲಾಗುವುದು. ಬಜೆಟ್‌ನಲ್ಲಿ ಹೆಚ್ಚಿನ ಅನುದಾನ ನೀಡುವಂತೆ ಮುಖ್ಯಮಂತ್ರಿಗಳಲ್ಲಿ ಮನವಿ ಮಾಡುತ್ತೇನೆ. ಸಂಸ್ಥೆಯಲ್ಲಿನ ಲೋಪದೋಷಗಳನ್ನು ಸರಿಪಡಿಸಲಾಗುವುದು ಎಂದರು.

# ನಾರಾಯಣಭಟ್ ಶಿವಪೂರ ದತ್ತಿ ಉಪನ್ಯಾಸ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಫೆ.3ರಂದು ಸಂಜೆ 6 ಗಂಟೆಗೆ ತೋಂಟದ ಸಿದ್ಧಲಿಂಗಶ್ರೀ ಕನ್ನಡ ಭವನ, ಕಸಾಪ ಕಾರ್ಯಾಲಯ ಗದಗ ಇಲ್ಲಿ ದಿ. ನಾರಾಯಣಭಟ್ ಶಿವಪೂರ ಇವರ ಸ್ಮರಣಾರ್ಥ ದತ್ತಿ ಉಪನ್ಯಾಸವನ್ನು ಏರ್ಪಡಿಸಲಾಗಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ವಹಿಸುವರು. ಕಥಾಕೀರ್ತನವನ್ನು ಸಿದ್ಧೇಶ್ವರಶಾಸ್ತ್ರಿಗಳು ತೆಲ್ಲೂರ ಇವರು ನಡೆಸಿಕೊಡುವರು. ಕರ್ನಾಟಕ ಸರಕಾರದಿಂದ ಕುಮಾರವ್ಯಾಸ ಪ್ರಶಸ್ತಿಗೆ ಭಾಜನರಾದ ಸಿದ್ಧೇಶ್ವರ ಶಾಸ್ತ್ರೀಗಳನ್ನು ಈ ಸಂದರ್ಭದಲ್ಲಿ ಸನ್ಮಾನಿಸಲಾಗುವದು.

ನಾರಾಯಣಭಟ್ ಶಿವಪೂರ ಇವರ ಸಂಸ್ಮರಣೆಯನ್ನು ಡಾ. ದತ್ತಪ್ರಸನ್ನ ಪಾಟೀಲ ಇವರು ಮಾಡುವರು. ದತ್ತಿದಾನಿಗಳು ಹಾಗೂ ನಗರದ ಖ್ಯಾತ ವೈದ್ಯರಾದ ಡಾ. ಅನಂತ ಶಿವಪೂರ, ಡಾ. ವಾಣಿ ಶಿವಪೂರ ಹಾಗೂ ಶಿವಪೂರ ಸಹೋದರರು ಉಪಸ್ಥಿತರಿರುವರು.

ಕಾರ್ಯಕ್ರಮದಲ್ಲಿ ಸಾಹಿತ್ಯಾಭಿಮಾನಿಗಳು, ಪರಿಷತ್ತಿನ ಸದಸ್ಯರು ಪಾಲ್ಗೊಳ್ಳಬೇಕೆಂದು ಕಾರ್ಯದರ್ಶಿಗಳಾದ ಶಿವಾನಂದ ಗಿಡ್ನಂದಿ, ಕಿಶೋರಬಾಬು ನಾಗರಕಟ್ಟಿ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

### ರೈಲು 4 ಗಂಟೆ ವಿಳಂಬ: ರೈಲ್ವೆ ಇಲಾಖೆಯವರ ವಿಳಂಬ ಧೋರಣೆಯಿಂದ ಗ್ರಾಹಕನಿಗೆ ಕಿರಿಕಿರಿ

# ಗ್ರಾಹಕನ ಕ್ಷಮೆ ಕೋರಲು ನಿರ್ದೇಶಿಸಿದ ಆಯೋಗ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಧಾರವಾಡದ ಮಾಳಮಡ್ಡಿ ನಿವಾಸಿ ಪ್ರಕಾಶ ಉಪ್ಪಾರ ಎಂಬುವವರು ಜರ್ಮನಿಯಲ್ಲಿ ನೆಲೆಸಿ, ಅಲ್ಲಿಯೇ ಕೆಲಸ ಮಾಡುತ್ತಿದ್ದರು. ಅವರು ತಮ್ಮ ಸಂಬಂಧಿಕರ ಮದುವೆ ಸಮಾರಂಭದಲ್ಲಿ ಪಾಲ್ಗೊಳ್ಳಲು ಭಾರತಕ್ಕೆ ಆಗಮಿಸಿದ್ದರು. ಮದುವೆ ಮುಗಿದ ನಂತರ ಜರ್ಮನಿಗೆ ಮರಳಲು ಮುಂಬೈನಿಂದ ವಿಮಾನ ಯಾನ ದಿ.28/11/2022ರಂದು ನಿಗದಿಯಾಗಿತ್ತು. ಅವರು ಧಾರವಾಡದಿಂದ ಮುಂಬೈ ತಲುಪಲು ರೈಲ್ವೆ ನಂ.17317ರಲ್ಲಿ 3ನೇ ಎಸಿ ಬುಕ್ ಮಾಡಿಸಿದ್ದರು.

ಆದರೆ ರೈಲು ನಿಗದಿತ ವೇಳೆಗಿಂತ 4 ಗಂಟೆ ತಡವಾಗಿ ದಾದರ್ ರೇಲ್ವೆ ಸ್ಟೇಶನ್ ತಲುಪಿತ್ತು. ಇದರಿಂದ ದೂರುದಾರರಿಗೆ ವಿಮಾನ ನಿಲ್ದಾಣದ ಒಳಗಡೆ ಹೋಗಲು ಅನಾನುಕೂಲ ಜೊತೆಗೆ ಮಾನಸಿಕ ಕಿರಿಕಿರಿ ಉಂಟಾಗಿತ್ತು. ಕೊನೆಗೆ ವಿಮಾನ ಹೊರಡುವ ಕೆಲವೇ ಕ್ಷಣಗಳಲ್ಲಿ ವಿಮಾನ ನಿಲ್ದಾಣದ ಸಿಬ್ಬಂದಿಗಳನ್ನು ವಿನಂತಿಸಿದ ದೂರುದಾರ ಜರ್ಮನಿಗೆ ತನ್ನ ಪ್ರಯಾಣ ಬೆಳೆಸಿದ್ದರು. ದೂರುದಾರನಿಗೆ ಲಗೇಜುಗಳನ್ನು ಆತ ಜರ್ಮನಿ ತಲುಪಿದ 2 ದಿನಗಳ ನಂತರ ತಡವಾಗಿ ಬೇರೆ ವಿಮಾನದ ಮೂಲಕ ಕಳುಹಿಸಿಕೊಟ್ಟಿದ್ದರು. ರೇಲ್ವೆ ಇಲಾಖೆಯವರ ಈ ವಿಳಂಬ ಧೋರಣೆಯಿಂದ ತಾನು ಮಾನಸಿಕ ಕಿರಿಕಿರಿ ಅನುಭವಿಸುವಂತಾಯಿತು. ಕಾರಣ ರೇಲ್ವೆ ಇಲಾಖೆಯವರ ನಡಾವಳಿಕೆ ಗ್ರಾಹಕರ ರಕ್ಷಣಾ ಕಾಯಿದೆ ಅಡಿ ಸೇವಾ ನ್ಯೂನತೆ ಆಗುತ್ತದೆ ಎಂದು, ಅವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ದೂರುದಾರ ದಿ.26/04/2023ರಂದು ಧಾರವಾಡ ಜಿಲ್ಲಾ ಗ್ರಾಹಕರ ಆಯೋಗಕ್ಕೆ ದೂರನ್ನು ಸಲ್ಲಿಸಿದ್ದರು.

ಈ ದೂರಿಗೆ ಆಕ್ಷೇಪಣೆ ಸಲ್ಲಿಸಿದ ರೇಲ್ವೆ ಇಲಾಖೆ ತಾವು ದೇಶದಲ್ಲಿ ಸಂಚರಿಸುವ ಯಾವುದೇ ರೈಲುಗಳ ಆಗಮನ ಮತ್ತು ನಿರ್ಗಮನದ ಗ್ಯಾರಂಟಿ ಕೊಡುವುದಿಲ್ಲ. ಅಲ್ಲದೇ ರೇಲ್ವೆ ಇಲಾಖೆ ಮತ್ತು ವಿಮಾನ ನಿಲ್ದಾಣದ ಪ್ರಾಧಿಕಾರದ ಮಧ್ಯೆ ಯಾವುದೇ ಒಪ್ಪಂದ ಇರುವುದಿಲ್ಲ. ಅಷ್ಟಕ್ಕೂ ದೂರುದಾರ ಸಂಚರಿಸುತ್ತಿದ್ದ ರೈಲ್ವೆ ನಂ.17317 ತಾಂತ್ರಿಕ ಕಾರಣಗಳಿಂದ 4 ಗಂಟೆ ವಿಳಂಬವಾಗಿ ಮುಂಬೈ ತಲುಪಿತ್ತು. ಅದರಲ್ಲಿ ರೇಲ್ವೆ ಇಲಾಖೆ ಯಾವುದೇ ಸೇವಾ ನ್ಯೂನತೆ ಎಸಗಿರುವುದಿಲ್ಲ ಎಂದು ತಮ್ಮ ವಿರುದ್ಧದ ದೂರಿಗೆ ಆಕ್ಷೇಪಣೆ ಸಲ್ಲಿಸಿದ್ದರು.

ಸದರಿ ದೂರಿನ ಬಗ್ಗೆ ಕೂಲಂಕುಷವಾಗಿ ವಿಚಾರಣೆ ನಡೆಸಿದ ಆಯೋಗದ ಅಧ್ಯಕ್ಷ ಈಶಪ್ಪ ಭೂತೆ, ಸದಸ್ಯರಾದ ವಿಶಾಲಾಕ್ಷಿ ಅ.ಬೋಳಶೆಟ್ಟಿ ಹಾಗೂ ಪ್ರಭು ಸಿ.ಹಿರೇಮಠ, ರೈಲು ನಿಗದಿತ ವೇಳೆಗೆ ಮುಂಬೈ ತಲುಪದೇ ಇದ್ದರೂ ಸಹ ದೂರುದಾರ ತಾನು ಪ್ರಯಾಣಿಸುವ ವಿಮಾನದ ಮೂಲಕ ವಿದೇಶ ಪ್ರಯಾಣ ಬೆಳೆಸುವಲ್ಲಿ ಸಫಲನಾಗಿದ್ದಾನೆ. ಆದರೆ ರೈಲು ವಿಳಂಬದಿಂದಾಗಿ ಆತ ವಿಮಾನ ನಿಲ್ದಾಣ ತಲುಪಲು ಅನಾನುಕೂಲ ಮತ್ತು ಮಾನಸಿಕ ಯಾತನೆ ಅನುಭವಿಸಿದ್ದರೂ ಸಹ ಎದುರುದಾರರು ಸೇವಾ ನ್ಯೂನತೆ ಎಸಗಿದ್ದಾರೆ ಅನ್ನುವುದನ್ನು ಒಪ್ಪಲಾಗುವುದಿಲ್ಲ ಎಂದು ಅಭಿಪ್ರಾಯಪಟ್ಟು, ದೂರುದಾರನ ದೂರನ್ನು ವಜಾಗೊಳಿಸಿ ಆದೇಶ ನೀಡಿರುವುದರ ಜೊತೆಗೆ ರೈಲು ವಿಳಂಬಕ್ಕಾಗಿ ಸಂಬಂಧಿಸಿದ ರೇಲ್ವೆ ಅಧಿಕಾರಿಗೆ ದೂರುದಾರರಲ್ಲಿ ಕ್ಷಮೆ ಯಾಚಿಸಲು ನಿರ್ದೇಶಿಸಿದೆ.

### ಎಸ್.ಎಂ. ಭೂಮರಡ್ಡಿ ಪದವಿಪೂರ್ವ ಕಾಲೇಜಿನಲ್ಲಿ ವಿವಿಧ ಚಟುವಟಿಕೆಗಳ ಸಮಾರೋಪ

# ಚಂಚಲ ಮನಸ್ಸಿಗೆ ಕಡಿವಾಣ ಹಾಕಿ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ವಿದ್ಯಾರ್ಥಿಗಳು ಶಿಸ್ತು ರೂಢಿಸಿಕೊಳ್ಳುವುದರೊಂದಿಗೆ ನಿರಂತರ ಅಧ್ಯಯನ ನಡೆಸಿದಾಗ ಯಶಸ್ಸಿನ ಹಾದಿ ಸುಲಭ ಎಂದು ಗವಿವ ಸಂಘದ ಆಡಳಿತಾಧಿಕಾರಿ ಪ್ರಶಾಂತ ಶಿವಪ್ಪಗೌಡರ ಅಭಿಪ್ರಾಯಪಟ್ಟರು.

ಸ್ಥಳೀಯ ಎಸ್.ಎಂ. ಭೂಮರಡ್ಡಿ ಪದವಿಪೂರ್ವ ಕಾಲೇಜಿನ ಸಭಾ ಭವನದಲ್ಲಿ ಸಾಹಿತ್ಯಿಕ, ಸಾಂಸ್ಕೃತಿಕ, ಕ್ರೀಡೆ ಹಾಗೂ ಎನ್‌ಎಸ್‌ಎಸ್ ಚಟುವಟಿಕೆಗಳ ಸಮಾರೋಪ ಸಮಾಭರದಲ್ಲಿ ಅವರು ಮಾತನಾಡುತ್ತಿದ್ದರು.



ವಿದ್ಯಾರ್ಥಿಗಳ ಜೀವನವನ್ನು ಬಂಗಾರದ ಜೀವನ ಎಂದು ಬಣ್ಣಿಸಲಾಗುತ್ತದೆ. ಹೀಗಾಗಿ, ವಿದ್ಯಾರ್ಥಿಗಳು ಶೈಕ್ಷಣಿಕ ಜೀವನದ ನಂತರವೂ ಸಹ ಜೀವನ ಗೋಲ್ಡನ್ ಲೈಫ್ ಆಗಬೇಕಾದರೆ ನಿರಂತರ ಅಧ್ಯಯನದೊಂದಿಗೆ ಯಶಸ್ಸಿನ ಗುರಿ ತಲುಪಲು ಶಿಸ್ತು-ಸಂಯಮ ಅಳವಡಿಸಿಕೊಳ್ಳಬೇಕು. ಚಂಚಲ ಮನಸ್ಸಿಗೆ ಕಡಿವಾಣ ಹಾಕುವುದೂ ಮುಖ್ಯವಾಗಿದೆ. ಹೀಗಾಗಿ ಪಠ್ಯದೊಂದಿಗೆ ಕ್ರೀಡೆ, ಸಾಹಿತ್ಯಿಕ ಹಾಗೂ ಎನ್‌ಎಸ್‌ಎಸ್ ಚಟುವಟಿಕೆಗಳಲ್ಲಿ ಭಾಗವಹಿಸಿದಾಗ ಸದೃಢ ಮನಸ್ಸನ್ನು ಹೊಂದಲು ಸಾಧ್ಯವಿದೆ ಎಂದರು.

ವಿಜಯಪುರ ಕಾರಾಗೃಹದ ಅಧೀಕ್ಷಕ ಡಾ. ಐ.ಜೆ. ಮ್ಯಾಗೇರಿ ಮಾತನಾಡಿ, ಕಾಲೇಜುಗಳ ಪ್ರಗತಿಗೆ ಪ್ರಾಂಶುಪಾಲರು ಸೇರಿ ಉಪನ್ಯಾಸಕರ ಪಾತ್ರ ಮಹತ್ವದ್ದಾಗಿರುತ್ತದೆ. ಯಾವುದೇ ವ್ಯವಸ್ಥೆ ಒಳ್ಳೆಯದಾಗಿರಬೇಕು ಎಂದಾದರೆ ಒಳ್ಳೆಯ ಮನಸ್ಸುಗಳೊಂದಿಗೆ ಸಕಾರಾತ್ಮಕ ಆಲೋಚನೆಗಳ ಸಮ್ಮಿಲನವಾದಾಗ ಅಭಿವೃದ್ಧಿ ಸಾಧ್ಯವಾಗುತ್ತದೆ ಎಂದರು.

ಕಾಲೇಜಿನ ಪ್ರಾಚಾರ್ಯ ಜಿ.ಬಿ. ಗುಡಿಮನಿ ಮಾತನಾಡಿ, ವಿದ್ಯಾರ್ಥಿಗಳು ಆಕರ್ಷಣೆಗೆ ಒಳಗಾಗದೆ ನಿರಂತರ ಅಧ್ಯಯನಕ್ಕೆ ಆದ್ಯತೆ ನೀಡಬೇಕು. ಅಲ್ಲದೆ ವಿದ್ಯಾರ್ಥಿಗಳ ಸರ್ವಾಂಗೀಣ ಅಭಿವೃದ್ಧಿಗೆ ಶಿಕ್ಷಣ ಸಂಸ್ಥೆ ತನ್ನದೇ ಆದ ಕೊಡುಗೆ ನೀಡುತ್ತಿದೆ. ಹೀಗಾಗಿ ಕಾಲೇಜಿನ ವಿದ್ಯಾರ್ಥಿಗಳು ಕ್ರಮಬದ್ಧ ಅಧ್ಯಯನದ ಮೂಲಕ ಶೈಕ್ಷಣಿಕ ಜೀವನದಲ್ಲಿ ಉತ್ತಮ ಸಾಧನೆಗೈದು ಸುಂದರ ಬದುಕನ್ನು ಕಟ್ಟಿಕೊಳ್ಳಬೇಕು ಎಂದರು.

ಪದವಿ ಕಾಲೇಜಿನ ಪ್ರಾಚಾರ್ಯ ಡಾ. ಎಸ್.ಎನ್. ಶಿವರಡ್ಡಿ, ನಿವೃತ್ತ ಉಪನ್ಯಾಸಕ ಬಿ.ಎ. ಕೆಂಚರಡ್ಡಿ, ಉಪನ್ಯಾಸಕರಾದ ಎ.ಎಸ್. ವಡ್ಡರ, ವಿ.ಎಂ. ಜೂಚನಿ, ಎಸ್.ಎಸ್. ವಾಲಿಕಾರ, ವಾಯ್. ಆರ್. ಸಕ್ರೋಜಿ, ಆನಂದ ಜೂಚನಿ, ಗೋಪಿ ರಾಯಬಾಗಿ, ಎಂ.ಎಲ್. ಕ್ವಾಟಿ, ಎಲ್.ಕೆ. ಹಿರೇಮಠ, ಮಂಜು ನಾಗರಾಳ ಮುಂತಾದವರಿದ್ದರು.

# ವಿಕಲಚೇತನರಿಗೆ ಕೃತಕ ಕಾಲು, ಸ್ಯಾಂಡಲ್ಸ್ ವಿತರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ರೆಡ್ ಕ್ರಾಸ್ ಭವನದಲ್ಲಿ ದಾನಿಗಳು ನೀಡಿದ ಹಣದಿಂದ ವಿಕಲಚೇತನರಿಗೆ ಕೃತಕ ಕಾಲು ಹಾಗೂ ಸ್ಯಾಂಡಲ್ಸ್ ವಿತರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರದ ವರ್ಕ್‌ಶಾಪ್‌ನಲ್ಲಿ ಪಿ&ಓ ತಂತ್ರಜ್ಞರಾದ ತಸ್ಲಂಅಲಿ ಜಿ ಮುಲ್ಲಾ ತಯಾರಿಸಿದ ಕೃತಕ ಕಾಲು, ಹಾಗೂ ಶೂ ಮೇಕರ್ ಶಿವಯೋಗಿ ಬೆಳವಡಿ ತಯಾರಿಸಿದ ಸ್ಯಾಂಡಲ್ಸ್, ಹ್ಯಾಂಡ್ ಸ್ಯಾಂಡಲ್ ಮತ್ತು ವಕ್ರಪಾದ ಸ್ಯಾಂಡಲ್ಸ್‌ಗಳನ್ನು ವಿಕಲಚೇತನ ಫಲಾನುಭವಿಗಳಿಗೆ ವಿತರಿಸಲಾಯಿತು. ರೆಡ್ ಕ್ರಾಸ್ ಸಂಸ್ಥೆಯ ಸಭಾಪತಿ ಡಾ. ಆರ್. ಎನ್. ಗೋಡಬೋಲೆ, ಆಡಳಿತ ಮಂಡಳಿಯ ಸದಸ್ಯರಾದ ದ್ರಾಕ್ಷಾಯಣಿ ಮೂರಶಿಳ್ಳಿನ, ಎಮ್.ಎಮ್. ಕಾಗದಗಾರ, ಬಣ್ಣದ ವ್ಯಾಪಾರಸ್ಥರಾದ ನಾಗನಾಥ ಜೋಶಿ ಹಾಗೂ ನಿವೃತ್ತ ಸಹಾಯಕ ಕೃಷಿ ಅಧಿಕಾರಿ ಎಮ್.ಪಿ. ಮೂಲಿಮನಿ, ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರದ ನೋಡಲ್ ಅಧಿಕಾರಿಗಳಾದ ಪ್ರಕಾಶ ಗಾಣಿಗೇರ ಹಾಗೂ ಸಿಬ್ಬಂದಿಗಳು ಹಾಜರಿದ್ದರು.

# ವೈದ್ಯರ ಸಂಘದ ಉದ್ಘಾಟನೆ ನಾಳೆ

■ವಿಜಯಸಾಕ್ಷಿ ಸುದ್ದಿ, ಗದಗ

ಲಕ್ಷ್ಮೇಶ್ವರ ತಾಲೂಕು ವೈದ್ಯರ ಸಂಘದ ಉದ್ಘಾಟನೆ ಮತ್ತು ಪದಗ್ರಹಣ ಸಮಾರಂಭ ಫೆ.4ರಂದು ಬೆಳಿಗ್ಗೆ 10 ಗಂಟೆಗೆ ಪಟ್ಟಣದ ಶ್ರೀ ವೀರಗಂಗಾಧರ ಸಮುದಾಯ ಭವನದಲ್ಲಿ ನೆರವೇರಲಿದೆ.

ತಾಲೂಕಾ ವೈದ್ಯರ ಸಂಘದ ಅಧ್ಯಕ್ಷ ಡಾ. ಪಿ.ಡಿ. ತೋಟದ ಅಧ್ಯಕ್ಷತೆ ವಹಿಸುವರು. ಶಾಸಕ ಡಾ.ಚಂದ್ರು ಲಮಾಣಿ ಉದ್ಘಾಟಿಸುವರು. ಹುಬ್ಬಳ್ಳಿಯ ಡಾ. ಮಹೇಶ ನಾಲ್ವಾಡ, ತಾಲೂಕಾ ವೈದ್ಯಾಧಿಕಾರಿ ಡಾ. ಸುಭಾಸ ದಾಯಗೊಂಡ, ಮಾಜಿ ಶಾಸಕರಾದ ಜಿ.ಎಂ. ಮಹಾಂತಶೆಟ್ಟರ, ಜಿ.ಎಸ್. ಗಡ್ಡದೇವರಮಠ, ಡಾ. ಎಸ್.ಸಿ. ಮಲ್ಲಾಡದ ಸೇರಿ ವೈದ್ಯರ ಸಂಘದ ಸದಸ್ಯರು ಉಪಸ್ಥಿತರಿರುವರು.

ಇದೇ ಸಂದರ್ಭದಲ್ಲಿ ವೈದ್ಯರ ಸಂಘ, ಡಾ. ಮಹೇಶ ನಾಲ್ವಾಡ ಪ್ರತಿಷ್ಠಾನ, ಸುಚಿರಾಯು ಆಸ್ಪತ್ರೆ, ರಾಜ್ಯ ನಿವೃತ್ತ ಸರ್ಕಾರಿ ನೌಕರರ ಸಂಘ ಹಾಗೂ ಹಿರಿಯ ನಾಗರಿಕರ ಕ್ಷೇಮಾಭಿವೃದ್ಧಿ ಸಂಘದ ಸಹಯೋಗದಲ್ಲಿ ಬೆಳಿಗ್ಗೆ 10ರಿಂದ ಮಧ್ಯಾಹ್ನ 2 ಗಂಟೆಯವರೆಗೆ ಉಚಿತ ಆರೋಗ್ಯ ಪರೀಕ್ಷೆ ಮತ್ತು ಔಷಧ ವಿತರಣಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಶಿಬಿರದಲ್ಲಿ 20ಕ್ಕೂ ಹೆಚ್ಚು ತಜ್ಞ ವೈದ್ಯರು ತಪಾಸಣೆ ನಡೆಸಲಿದ್ದಾರೆ. ನಾಗರಿಕರು ತಮ್ಮ ಆಧಾರ್ ಮತ್ತು ರೇಷನ್ ಕಾರ್ಡ್‌ನೊಂದಿಗೆ ಆಗಮಿಸಿ ಸೇವಾ ಶಿಬಿರದ ಸದುಪಯೋಗ ಪಡೆದುಕೊಳ್ಳಬೇಕು ಎಂದು ವೈದ್ಯರ ಸಂಘದ ಕಾರ್ಯದರ್ಶಿ ಡಾ. ವಿನೋದ ಹೊನ್ನಿಕೊಪ್ಪ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಭಾರತೀಯ ಕೃಷಿಕ ಸಮಾಜದ ಚಿಕ್ಕಹಂದಿಗೋಳ ಗ್ರಾಮ ಘಟಕ ಉದ್ಘಾಟನೆ

# ರೈತರು ಒಗ್ಗಟ್ಟಿನಿಂದ ಹೋರಾಡಬೇಕು

■ವಿಜಯಸಾಕ್ಷಿ ಸುದ್ದಿ, ಗದಗ

ಇಂದು ರೈತರ ಬೆಳೆಗಳಿಗೆ ಸಿಗಬೇಕಾದ ಬೆಲೆ ಸಿಗುತ್ತಿಲ್ಲ. ಆದರೆ, ಹಸಿರು ಶಾಲು ಹಾಕಿಕೊಂಡು ಅನೇಕ ಸಂಘಟನೆಗಳು ಹುಟ್ಟಿಕೊಂಡಿವೆ. ರೈತರು ನಮಗೆ ನ್ಯಾಯ ಸಿಗಬಹುದೆಂದು ಅನೇಕ ಸಂಘಟನೆಗಳಿಗೆ ಸೇರುತ್ತಿದ್ದಾರೆ. ಇವು ಚುನಾವಣೆಯ ಹೊಸ್ತಿಲಲ್ಲಿ ಹೆಚ್ಚಾಗಿ ಕಾಣುತ್ತಿದ್ದು, ಇದು ನಮ್ಮನ್ನು ಒಡೆದು ಆಳುವ ನೀತಿಯಾಗಿದೆ ಎಂದು ಸಾಮಾಜಿಕ ಕಾರ್ಯಕರ್ತ, ನ್ಯಾಯವಾದಿ ರವಿಕಾಂತ ಅಂಗಡಿ ಹೇಳಿದರು.

ತಾಲೂಕಿನ ಚಿಕ್ಕಹಂದಿಗೋಳ ಗ್ರಾಮದಲ್ಲಿ ಭಾರತೀಯ ಕೃಷಿಕ ಸಮಾಜ ನವದೆಹಲಿ-ಕರ್ನಾಟಕ ರಾಜ್ಯ ಸಂಘಟನೆಯ ಸಭೆಯಲ್ಲಿ ರೈತರನ್ನುದ್ದೇಶಿಸಿ ಅವರು ಮಾತನಾಡಿದರು.

ರಾಜ್ಯ ಘಟಕದ ಅಧ್ಯಕ್ಷ ಶಿವನಗೌಡ ಗೌಡರ ಮಾತನಾಡಿ, ಚಿಕ್ಕಹಂದಿಗೋಳ ಗ್ರಾಮದ ಎಲ್ಲಾ ರೈತರು ಒಗ್ಗಟ್ಟಿನಿಂದ ಈ ಸಂಘಟನೆಯನ್ನು ಮಾಡಿದ್ದು, ಈ ಸಂಘಟನೆಯಲ್ಲಿ ಭಿನ್ನಾಭಿಪ್ರಾಯಗಳು ಬರದಂತೆ ನಾವೆಲ್ಲರೂ ಒಂದಾಗಿ ಹೋರಾಡಿದರೆ ದೇಶದಲ್ಲಿ



ಎಲ್ಲಾ ರೈತರು ಎಚ್ಚೆತ್ತುಕೊಂಡು, ವಿವಿಧ ರೈತ ಸಂಘಟನೆಗಳು ಒಂದೇ ವೇದಿಕೆಯಲ್ಲಿ ಒಗ್ಗಟ್ಟಾದರೆ ಮಾತ್ರ ಮುಂದಿನ ದಿನಗಳಲ್ಲಿ ರೈತರಿಗೆ ನ್ಯಾಯ ದೊರೆಯುತ್ತದೆ ಎಂದು ರವಿಕಾಂತ ಅಂಗಡಿ ರೈತರನ್ನುದ್ದೇಶಿಸಿ ನುಡಿದರು.

ರೈತರ ಅನ್ಯಾಯಗಳಿಗೆ ಪರಿಹಾರ ಸಿಗಬಹುದು. ಅನೇಕ ರೈತ ಸಂಘಟನೆಗಳು ಇದ್ದರೂ ಭಾರತದ ದೇಶದ ಬೆನ್ನಲುಬಾದ ರೈತರಿಗೆ ಸಿಗಬೇಕಾದ ನ್ಯಾಯ ಸಿಗುತ್ತಿಲ್ಲ. ಕಾರಣ, ನಮ್ಮ ರೈತ ಸಂಘಟನೆಗಳು ಒಗ್ಗಟ್ಟಾಗಿ ಶಕ್ತಿ ಪ್ರದರ್ಶನ ಮಾಡಿದರೆ ಮಾತ್ರ ಮುಂದಿನ ದಿನಗಳಲ್ಲಿ ನಮಗೆ ನ್ಯಾಯ ಸಿಕ್ಕೀತು ಎಂದರು.

ಇದೇ ಸಂದರ್ಭದಲ್ಲಿ ರವಿಕಾಂತ ಅಂಗಡಿ ಹಾಗೂ ಶಿವನಗೌಡ ಗೌಡರ ಅವರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಸಂಘಟನೆಯ ಪದಾಧಿಕಾರಿಗಳಾದ ಸೋಮಪ್ಪ ದುಂದೂರ, ದೇವಪ್ಪ ಸೈದಾಪೂರ, ದೇವಪ್ಪ ದ್ಯಾವನಸಿ, ಹಾಲಪ್ಪ ಹುನಕುಂಟಿ, ಕೃಷ್ಣಗೌಡ ಅಯ್ಯನಗೌಡರ, ಫಕೀರಸಾಬ ಹು.ನದಾಫ, ಸುಭಾಷ ಹ.ಹೆಬಸೂರ, ಹುಚ್ಚಪ್ಪ ಮು.ಬಡಿಗೇರ, ಯಲ್ಲಪ್ಪ ಜೆ.ಕಮ್ಮಾರ, ಶಬ್ಬೀರಸಾಬ ಫ.ನದಾಫ, ಮಾಬುಸಾಬ ಸ.ನದಾಫ, ಮಂಜುನಾಥ ವಿ.ಆಲೂರ, ದಾದಾಪೀರ ಗ.ಅಣ್ಣಿಗೇರಿ, ಕಿರಣ ಫ.ಬಾಬಣ್ಣವರ, ಬಸವರಾಜ ಶಿ.ಚುರ್ಚಿಹಾಳ, ದೇವಪ್ಪ ಪ.ಆಲೂರ, ತಿರಕಪ್ಪ ಮಾ.ತಳವಾರ, ಗಿರೀಶಗೌಡ ಶಿ.ಗೌಡರ, ಜಗದೀಶ ಮ. ಹುನಕುಂಟ, ವೀರಣ್ಣ ಗೌಡರ, ಬಸವರಾಜ ಆಲೂರ, ಅರ್ಜುನಪ್ಪ ರಾ.ಶ್ಯಾಗೋಟಿ, ವಿರುಪಾಕ್ಷಗೌಡ ಬ.ಗೌಡರ, ಶರಣಪ್ಪ ಪೂಜಾರ, ಶಿವಯ್ಯ ಕಾಶೀಮಠ, ಕನಕಪ್ಪ ಪೂಜಾರ ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka